# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 95 | WEDNESDAY 17-06-2026 | PRGI No : KNKAN/26/A0962 | Pages:4 | Rs.2.00 | M: 9742418836


## RSSನವರು ಹಿಂದುಗಳೇ ಅಲ್ಲ, ಕೇವಲ ಹಿಂದುತ್ವವಾದಿಗಳು: ಸಚಿವ ಯತೀಂದ್ರ ಸಿದ್ದರಾಮಯ್ಯ



ಮೈಸೂರು: ಗೃಹ ಸಚಿವ ಪ್ರಿಯಾಂಕ್ ಖರ್ಗೆ ನಂತರ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು ರಾಷ್ಟ್ರೀಯ ಸ್ವಯಂಸೇವಕ ಸಂಘದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಆರ್‌ಎಸ್‌ಎಸ್ ಸದಸ್ಯರು ಹಿಂದುಗಳೇ ಅಲ್ಲ, ಕೇವಲ ಹಿಂದುತ್ವವಾದಿಗಳು ಎಂದು ಮಂಗಳವಾರ ಹೇಳಿದ್ದಾರೆ.

ಇಂದು ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯತೀಂದ್ರ ಅವರು, ಧರ್ಮದ ಹೆಸರಿನಲ್ಲಿ ಏನು ಬೇಕಾದರೂ ಮಾಡುವಂತಿಲ್ಲ. ಆರ್‌ಎಸ್‌ಎಸ್ ಅನ್ನು ಕೇವಲ ಸಾಂಸ್ಕೃತಿಕ ಸಂಘಟನೆ ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದರು.

ಆರ್‌ಎಸ್‌ಎಸ್, ಬಿಜೆಪಿ ಪರವಾಗಿ ಕಾರ್ಯನಿರ್ವಹಿಸುವ ಒಂದು ರಾಜಕೀಯ ಸಂಸ್ಥೆಯಾಗಿದೆ. ಆರ್‌ಎಸ್‌ಎಸ್ ಕೋಟ್ಯಾಂತರ ರೂಪಾಯಿ ಮೌಲ್ಯದ ಆಸ್ತಿ ಮತ್ತು ಹಣಕಾಸು ವ್ಯವಹಾರಗಳನ್ನು ಹೊಂದಿದೆ. ಈ ಆರ್ಥಿಕ ವ್ಯವಹಾರಗಳಿಗೆ ಲೆಕ್ಕಪತ್ರವನ್ನು ನೀಡಬೇಕು ಎಂದು ಆಗ್ರಹಿಸಿದರು. ದೇಶದಲ್ಲಿ ಎಲ್ಲರಿಗೂ ಒಂದೇ ಕಾನೂನು ಇದೆ. ಯಾವುದೇ ಸಂಘಟನೆ ತನ್ನನ್ನು ತಾನು 'ಹಿಂದೂ ಧರ್ಮ'ದ ನೆರಳಲ್ಲಿ ಬಚ್ಚಿಟ್ಟುಕೊಂಡು, ಕಾನೂನಿನಿಂದ ವಿನಾಯಿತಿ ಪಡೆಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಗೃಹ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ನೋಂದಣಿ ಬಗ್ಗೆ ಪ್ರಶ್ನಿಸುತ್ತಿರುವುದು ಕಾನೂನು ಪ್ರಕಾರ ಸರಿಯಾಗಿದೆ. ಆರ್‌ಎಸ್‌ಎಸ್ ಸಾಂಸ್ಕೃತಿಕ ಸಂಘಟನೆ ಎಂದು ಹೇಳಿಕೊಂಡರೂ, ವಾಸ್ತವದಲ್ಲಿ ಅದೊಂದು ರಾಜಕೀಯ ಸಂಘಟನೆ. ಅದು ಪ್ರತಿಯೊಂದು ಚುನಾವಣೆಯಲ್ಲಿಯೂ ಬಿಜೆಪಿ ಪರವಾಗಿ ಕೆಲಸ ಮಾಡುತ್ತದೆ. ಆದ್ದರಿಂದ, ಆರ್‌ಎಸ್‌ಎಸ್ ದೇಶದ ಕಾನೂನುಗಳನ್ನು ಪಾಲಿಸಬೇಕು ಮತ್ತು ನೋಂದಾಯಿಸಿಕೊಳ್ಳಬೇಕು ಎಂದು ಯತೀಂದ್ರ ಸಿದ್ದರಾಮಯ್ಯ ಆಗ್ರಹಿಸಿದರು.

# ಆರ್ ಎಸ್ ಎಸ್ ಚಟುವಟಿಕೆ ಪಾರದರ್ಶಕ

ಬೆಂಗಳೂರು: ಆರ್ ಎಸ್ ಎಸ್ ನ ಹಣದ ಮೂಲದ ಲೆಕ್ಕ ಕೇಳಿರುವ ಸಚಿವ ಪ್ರಿಯಾಂಕ ಖರ್ಗೆ ವಿರುದ್ಧ ಕಿಡಿ ಕಾರಿರುವ ಬಿಜೆಪಿ ರಾಜ್ಯಾಧ್ಯಕ್ಷೇಂದ್ರ ಅವರು ಸ್ವಾತಂತ್ರ್ಯೋಧರು ಉದಾತ್ತ ಉದ್ದೇಶಕ್ಕಾಗಿ ತಮ್ಮ ಬೆವರ ಹನಿಯ ಹಣವನ್ನು ತೊಡಗಿಸಿ ಕಟ್ಟಿದ ಸುಮಾರು 5000 ಕೋಟಿಯ ಆಸ್ತಿ ಹೊಂದಿದ್ದ ಹೆರಾಲ್ಡ್ ಸಂಸ್ಥೆಯನ್ನು'ಯಂಗ್ ಇಂಡಿಯನ್' ಹೆಸರಲ್ಲಿ ನುಂಗಿ ನೀರು ಕುಡಿದ ನೆಹರು ಕುಟುಂಬದ ಮಹಾನ್ ಫಲಾನುಭವಿಗಳಾಗಿರುವ ಖರ್ಗೆ ಕುಟುಂಬದ ಪ್ರಿಯಾಂಖರ್ಗೆ ಅವರೇ, ರಾಷ್ಟ್ರೀಯ ಸ್ವಯಂ ಸೇವಕ ಸಂಘ ಪಾರದರ್ಶಕ ಯ ಬದ್ಧತೆಯನ್ನು ಪಸರಿಸುವಲ್ಲಿ ತೋರಿದ ಸಮರ್ಪಣೆ ಹಾಗೂ ತ್ಯಾಗದ ಪ್ರತೀಕವಾಗಿ ಇಂದು ವಿಶ್ವದ ಅತ್ಯಂತ ದೊಡ್ಡ ಸಂಸ್ಥೆಯಾಗಿ ಬೆಳೆದು ನಿಂತಿದೆ. ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಚಟುವಟಿಕೆಗಳೆಲ್ಲವೂ ನೇರ–ದಿಟ್ಟ– ಪಾರದರ್ಶಕ. ಪ್ರತೀ ಚಟುವಟಿಕೆಗಳೂ ಬಹಿರಂಗದಲ್ಲಿ ಅನಾವರಣ. ಎಂದು ಹೇಳಿದ್ದಾರೆ



ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು ರಾಷ್ಟ್ರ ವಿಧ್ವಂಸಕ ಚಟುವಟಿಕೆಯ ಅನೇಕ ಅಲ್ಪ ಸಂಖ್ಯಾತ ಹೆಸರಿನ ಮತೀಯವಾದಿ ಸಂಘಟನೆಗಳು ಈ ದೇಶದಲ್ಲಿ ತಲೆಯೆತ್ತಿರುವುದು, ಅಕ್ರಮ ವಿದೇಶಿ ದೇಣಿಗೆ ಪಡೆದು ರಾಷ್ಟ್ರ ದ್ರೋಹಿ ಚಟುವಟಿಕೆಗಳಲ್ಲಿ ತೊಡಗಿಸುತ್ತಿರುವ ಮಾಹಿತಿ ಗೃಹ ಇಲಾಖೆ ನಡೆಸುತ್ತಿರುವ ನಿಮ್ಮ ಬಳಿಯೇ ಇದೆ.

ಈ ಬಗ್ಗೆ ಪತ್ರ ಬರೆದು ಆ ಸಂಸ್ಥೆಗಳಿಂದ ವಿವರ ಏಕೆ ನೀವು ಕೇಳುವುದಿಲ್ಲ ಎಂದು ಪ್ರಶ್ನಿಸಿದ್ದಾರೆ


ರಾಷ್ಟ್ರೀಯ ಸ್ವಯಂ ಸೇವಕ ಸಂಘ ಮದರಸಾಗಳಂತೆ ಗುಪ್ತವಾಗಿ ಕಾರ್ಯನಿರ್ವಹಿಸುವುದಿಲ್ಲ. ಕೇವಲ ಮತಾಂಧತೆಯನ್ನು ಬಿತ್ತಿ ರಾಷ್ಟ್ರೀಯತೆಯನ್ನು ವಿರೋಧಿಸಲು ಪ್ರಚೋದನೆ ನೀಡುವ ಮದರಸದಂಥಾ ಸಂಸ್ಥೆಗಳ ಚಟುವಟಿಕೆಗಳು ನಿಮ್ಮ ಕಣ್ಣಿಗೆ ಬೀಳುವುದಿಲ್ಲ, ಕಿವಿಗೂ ಕೇಳಿಸುವುದಿಲ್ಲ. ಏಕೆಂದರೆ ಅದರ ಮೂಲದಿಂದ ಉತ್ಪತ್ತಿಯಾಗುತಿರುವ ಮತಬ್ಯಾಂಕ್ ಆಧರಿಸಿ ಅಧಿಕಾರ ಅನುಭವಿಸುತ್ತಿರುವ ನಿಮಗೆ ರಾಷ್ಟ್ರ ವಿಧ್ವಂಸಕ ಚಟುವಟಿಕೆಯ ಬಗ್ಗೆ ತಲೆಕೆಡಿಸಿಕೊಳ್ಳುವ ಬದ್ಧತೆ–ನೈತಿಕತೆ ಇರಲು ಹೇಗೆ ಸಾಧ್ಯ ಎಂದು ವಾಗ್ದಾಳಿ ನಡೆಸಿದ್ದಾರೆ

ರಾಷ್ಟ್ರೀಯ ಸ್ವಯಂ ಸಂಘದ ನೋಂದಣಿ ಕುರಿತು ವಿಪರೀತಿ ತಲೆಕೆಡಿಸಿಕೊಂಡಿರುವ ನಿಮ್ಮಂತವರಿಗೆ ಮಾನ್ಯ ಮೋಹನ್ ಭಾಗವತ್ ಜೀ ಏನು ಉತ್ತರ ಕೊಡಬೇಕೋ ಅದನ್ನು ಸರಿಯಾಗಿಯೇ ಕೊಟ್ಟಿದ್ದಾರೆ. ಸದ್ಯ ನಿಮ್ಮ ರಾಜಕೀಯ ಬಂಡವಾಳ ಆರ್ ಎಸ್ ಎಸ್ ಸಂಘಟನೆಯನ್ನು ಅನ್ನು ಬಾಲಿಶವಾಗಿ ಟೀಕಿಸುವುದು, ಆ ಮೂಲಕ ನೆಹರು ಕುಟುಂಬದ ಕುಡಿಗಳನ್ನು ಸಂತೃಪ್ತಿ ಪಡಿಸುವುದು. ಇದರಲ್ಲಿ ನಿಮಗೆ ವಿಕೃತ ಖುಷಿ ಸಿಗುವುದಾದರೆ ಬೈದುಕೊಳ್ಳಿ, ನಿಮ್ಮ ಬಗ್ಗೆ ಮರುಕ ಉಂಟಾಗುತ್ತೆ ಏಕೆಂದರೆ ನೀವು ಆಕಾಶಕ್ಕೆ ಉಗುಳುತ್ತಿದ್ದೀರಿ ಎಂಬ ಸತ್ಯ ನಿಮಗರಿವಿದೆಯೋ ಇಲ್ಲವೋ, ಆದರೆ ಈ ಕಾಯಕದಲ್ಲಿ ನಿಮಗೆ ಸಂತೃಪ್ತಿ ಸಿಗುವುದಾದರೆ ಇದನ್ನು ಮುಂದುವರಿಸಿ. ನಿಮ್ಮ ಪ್ರತಿ ತೆಗಳಿಕೆಯು ಸುದ್ದಿಯಾಗುತ್ತದೆ, ಪ್ರತಿಕ್ರಿಯೆ ಹರಿದು ಬರುತ್ತದೆ ಎಂಬ ಭ್ರಮೆಯ ಪೊರೆ ಅತೀ ಶೀಘ್ರದಲ್ಲಿಯೇ ಕಳಚಿ ಬೀಳಲಿದೆ. ಎಂದಿದ್ದಾರೆ

## ಇಂದು ವಿದ್ಯಾರ್ಥಿಗಳಿಗೆ 'ತೇಜಸ್ವಿಭವಃ' ವಿಶೇಷ ಕಾರ್ಯಾಗಾರ
## ರಾಷ್ಟ್ರಸಂತ ಸ್ವಾಮಿ ನಿರ್ಭಯಾನಂದ ಶ್ರೀಗಳು ಭಾಗಿ

**ಬೆಳಗಾವಿ ವಾರ್ತೆ ಮೂಡಲಗಿ:** ತಾಲ್ಲೂಕಿನ ನಾಗನೂರ ಪಟ್ಟಣದ ಅಥರ್ವ ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯಕ್ಕೆ ಬುಧವಾರ ಜೂ.17 ರಂದು ಗದಗ ಹಾಗೂ ವಿಜಯಪುರ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಸ್ವಾಮಿ ನಿರ್ಭಯಾನಂದ ಸರಸ್ವತಿ ಶ್ರೀಗಳು ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಉಪನ್ಯಾಸ ನೀಡಲಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಜಂಬಗಿ ತಿಳಿಸಿದ್ದಾರೆ.

ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗಾಗಿ ಅಥರ್ವ ತೇಜಸ್ವಿಭವಃ–2026 ಎಂಬ ವಿಶೇಷ ಉಪನ್ಯಾಸ ಕಾರ್ಯಾಗಾರವನ್ನು ಜೂ. 17 ರಂದು ಏರ್ಪಡಿಸಲಾಗಿದ್ದು, ಬೆಳಿಗ್ಗೆ 9.30 ರಿಂದ ಸಂಜೆ 4.30ರವರೆಗೆ ನಡೆಯುವ ಈ ಕಾರ್ಯಾಗಾರವನ್ನು ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ



ಸ್ವಾಮಿ ನಿರ್ಭಯಾನಂದ ಸರಸ್ವತಿ ಶ್ರೀಗಳು

ಉದ್ಘಾಟಿಸಲಿದ್ದಾರೆ. ಬೆಂಗಳೂರಿನ ಸೀಕ್ ಕೌಶಲ್ಯ ತರಬೇತಿ ಸಂಸ್ಥೆಯ ಅಧ್ಯಕ್ಷ ಹಾಗೂ ಹಿರಿಯ ಶಿಕ್ಷಣ ತಜ್ಞ

ರಘೋತ್ತಮ ರಾವ್ ಮಧ್ಯಾಹ್ನದ ಅವಧಿಗೆ ಉಪನ್ಯಾಸ ನೀಡಲಿದ್ದಾರೆ. ಕಾರ್ಯಾಗಾರದ ಅಧ್ಯಕ್ಷತೆಯನ್ನು ನಾಗನೂರ ಶ್ರೀ ಮಹಾಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಸನಗೌಡ ಪಾಟೀಲ ವಹಿಸಲಿದ್ದಾರೆ. ಪ್ರಾಚಾರ್ಯ ಗಿರೀಶ ಗೋರಬಾಳ

ನಿರ್ದೇಶಕರಾದ ಡಾ. ಸಂತೋಷ ಮಿರ್ಜಿ, ಚೇತನ ಜೋಗನ್ನವರ, ಆಶಿವಾದ ಹುಲಕುಂದ ಉಪಸ್ಥಿತರಿಲಿದ್ದಾರೆ.

ವಿದ್ಯಾರ್ಥಿ ಜೀವನದಲ್ಲಿ ಅಧ್ಯಯನದಲ್ಲಿ ಏಕಾಗ್ರತೆ, ಶಿಸ್ತು, ನೈತಿಕತೆ, ರಾಷ್ಟ್ರಭಕ್ತಿ, ಭವಿಷ್ಯದ ಅವಕಾಶಗಳ

ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ಈ ಕಾರ್ಯಾಗಾರ ಅತ್ಯಂತ ಮಹತ್ವವೆನಿಸಿದ್ದು, ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳ ಜೊತೆಗೆ ಈ ಭಾಗದ 200ಕ್ಕೂ ಅಧಿಕ ಶಿಕ್ಷಣಪ್ರೇಮಿಗಳು, ಸಾಹಿತಿಗಳು ಹಾಗೂ ಆಧ್ಯಾತ್ಮಿಕ ಚಿಂತಕರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ವೆಂಕಟೇಶ ಜಂಬಗಿ ತಿಳಿಸಿದ್ದಾರೆ.

## ಆತ್ಮೀಯ ಸನ್ಮಾನ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಮುಖ್ಯ ಶಿಕ್ಷಕರಾಗಿ ಪದೋನ್ನತಿ ಹೊಂದಿದ ಡಾ ಎಚ್ ಬಿ ಕೊರವರ ಅವರು ಮಂಜುನಾಥನಗರ ಶಾಲೆಯಿಂದ ಬಸವೇಶ್ವರ ನಗರದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಗೆ ವರ್ಗವಾಗಿ ಬಂದಿರುವ ಶುಭ ಸಂದರ್ಭದಲ್ಲಿ ಮುಖ್ಯ ಶಿಕ್ಷಕ ಡಾ ಎಚ್ ಬಿ ಕೊರವರ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಗ್ರಂಥ ನೀಡಿ, ಮಾಲಾರ್ಪಣೆ ಮಾಡಿ, ಶ್ರದ್ಧಾ, ಭಕ್ತಿಯಿಂದ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಹುತ್ಪೂರ್ವಕವಾಗಿ ಅಭಿನಂದನೆಗಳನ್ನು ಸಲ್ಲಿಸಿದರು.

ಬಸವೇಶ್ವರ ನಗರ ಸರಕಾರಿ ಮಾದರಿ ಶಾಲೆಯು ಡಾ ಎಚ್ ಬಿ ಕೊರವರ ಅವರ ನೇತೃತ್ವದಲ್ಲಿ ಸರ್ವ ತೋಮುಖ ಅಭಿವೃದ್ಧಿ ಕಾರ್ಯಗಳು ಜರುಗಲಿ ಎಂದು ಶುಭ ಕೋರಿದರು.

ನಿವೃತ್ತ ವೈದ್ಯಾಧಿಕಾರಿ, ಹಿರಿಯರಾದ ಡಾ ವಿ. ಬಿ. ನಿಟಾಲಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ



ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಶಿಕ್ಷಕಿಯರಾದ ಅಕ್ಕಮ್ಮ ವಿ. ಶೆಟ್ಟರ್ , ಶಕುಂತಲಾ ಜಿ ನವಲಗುಂದ, ಅನಸೂಯಾ ವೈ ಮರಕುಂಬಿ, ವಿದ್ಯಾ ಬನ್ನಾ, ಸವಿತಾ ಪಿ ಮಗದೂರ, ಶ್ರೀದೇವಿ ಎಚ್ ಕುಲಕರ್ಣಿ, ವೀಣಾ ಪ್ರ. ಪಾಟೀಲ್, ಜ್ಯೋತಿ ಶಾ ಕೆಳದಿಮಠ, ಶಾಲೆಯ ಮಕ್ಕಳು, ಪಾಲಕರು, ಮುಂತಾದವರು ಭಾಗವಹಿಸಿದ್ದರು. ಶಾಲೆಯಲ್ಲಿ ವನಮಹೋತ್ಸವ ಆಚರಿಸಲಾಯಿತು. ಶಾಲೆಯ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು.

## ಜಾಲಿ ಲೈಫ್‌ಗಾಗಿ ಪತಿ ಕೊಂದ ಪತ್ನಿ, ಪ್ರಿಯಕರ ಸೇರಿ 9 ಜನ ಅರೆಸ್ಟ್

**ಬೆಳಗಾವಿ ವಾರ್ತೆ ಬೆಳಗಾವಿ:** ಪತಿಯ ಹೆಸರಿನಲ್ಲಿರುವ 2 ಕೋಟಿ ವಿಮಾ ಹಣ ಹಾಗೂ ಪ್ರಿಯಕರನೊಂದಿಗೆ ಜಾಲಿ ಲೈಫ್ ಆಸೆಗೆ ಸಲೈನ್‌ನಲ್ಲಿ ಕೀಟನಾಶಕ ಸೇರಿಸಿ ಕೊಟ್ಟು ಮಾಜಿ ಸೈನಿಕನನ್ನು ಕೊಂದ ಪ್ರಕರಣಕ್ಕೆ ಸಂಬಂಧಿಸಿ ಮೃತನ ಪತ್ನಿ, ಆಕೆಯ ಪ್ರಿಯಕರ ಸೇರಿ 9 ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಯೋಧನ ಪತ್ನಿ ಸುಮಾ, ಆಕೆಯ ಪ್ರಿಯಕರ ಪುಂಡಲೀಕ ಕೃತ್ಯಕ್ಕೆ ಸಾಥ್ ಕೊಟ್ಟ ಅಪ್ಪಾಸಾಬ್ ನಾಯಿಕವಾಡಿ, ಚನ್ನಪ್ಪಾ ಅಡವಿಸ್ವಾಮಿಮಠ, ನಾಗರಾಜು, ಅಶೋಕ ಗುಜನಾಳ, ಬಸವರಾಜ್ ಬಸ್ಮೆ, ರಾಹುಲ್ ಜೋಗಿ ಎಂಬುವರನ್ನು ಬಂಧಿಸಲಾಗಿದೆ.

**ಘಟನೆ ಏನು:** ಲಕ್ಷ್ಮೀ ಜಾತ್ರೆಗೆ ಎಂದು ಬೈಕಿನಲ್ಲಿ ತೆರಳಿದ್ದ ಮಾಜಿ ಸೈನಿಕ ಸಂದೀಪ ಮಂಜರಿ (46) ಬೈಕ್‌ನಿಂದ ಬಿದ್ದು ಗಾಯಗೊಂಡಿದ್ದರು. ತಕ್ಷಣವೇ ಅವರನ್ನು ಘಟಪ್ರಭಾದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಲ್ಲಿ ಚಿಕಿತ್ಸೆ ಪಡೆದು ಪತಿ ಚೇತರಿಸಿಕೊಳ್ಳುತ್ತಿರುವುದನ್ನು ಕಂಡು ಪತ್ನಿ ಸುಮಾ ಆತನ ಕೊಲೆಗೆ ಸ್ಕೆಚ್ ರೂಪಿಸಿದ್ದಳು.

ಸಂದೀಪ ಹೆಸರಿನಲ್ಲಿ ಎಚ್‌ಡಿಎಫ್‌ಸಿ ಮತ್ತು ಎಸ್‌ಬಿಐ ಬ್ಯಾಂಕ್‌ಗಳಲ್ಲಿ ವಿಮೆ ಮಾಡಿಸಲಾಗಿತ್ತು. ರಸ್ತೆ ಅಪಘಾತದಲ್ಲಿ ಮರಣ ಹೊಂದಿದರೆ ಸುಮಾರು 2 ಕೋಟಿ



ರೂ. ವಿಮಾ ಹಣ ಬರುತ್ತದೆ ಎಂಬ ದುರಾಸೆಯಿಂದ ಆರೋಪಿ ಪುಂಡಲೀಕ ವಿಠಲ ಡೊಂಬರ ಸೇರಿ, ಸಲೈನ್ ಬಾಟಲ್‌ನಲ್ಲಿ ವಿಷ ಬೆರೆಸಿ ಹಾಗೂ ನಿದ್ದೆ ಮಾತ್ರೆ ಸೇವಿಸಲು ನೀಡಿ ಸಂದೀಪ ಅವರನ್ನು ಹತ್ಯೆ ಮಾಡಿದ್ದರು. ನಂತರ ಇದೊಂದು ರಸ್ತೆ ಅಪಘಾತವೆಂದು ಬಿಂಬಿಸಿ ಯಮಕನ'ಮರಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಪ್ರಕರಣ ಮುಚ್ಚಿಹಾಕಲು ಮತ್ತು ಮರ ಣೋತ್ತರ ಪರೀಕ್ಷಾ ವರದಿಯಲ್ಲಿ ವಿಷದ ಅಂಶ ಕಂಡು ಬರದಂತೆ ಮಾಡಲು, ಬೆಳಗಾ ವಿಯ ಆರ್‌ಎಫ್‌ಎಸ್‌ಎಲ್ ಪ್ರಯೋಗಾ ಲಯದ ಸಿಬ್ಬಂದಿ ಹಾಗೂ ವೈದ್ಯರು ಸೇರಿ ದಂತೆ ಹಲವರನ್ನು ಬಳಸಿಕೊಂಡಿದ್ದರು. ದೂರಿನಂತೆ ಮೃತದೇಹವನ್ನು ಉಪವಿ ಭಾಗಾಧಿಕಾರಿ ಶ್ರವಣ ಕುಮಾರ್ ನೇತೃ ತ್ವದಲ್ಲಿ ಹೂತಿದ್ದ ಸ್ಥಳದಿಂದ ಹೊರತೆಗೆದು ಪುನಃ ಮರಣೋತ್ತರ ಪರೀಕ್ಷೆ ನಡೆಸಲಾ ಗಿತ್ತು. ಮರಣೋತ್ತರ ಪರೀಕ್ಷೆಯಲ್ಲಿ ಸಾವಿಗೆ ವಿಷಪ್ರಾಶನ ಕಾರಣ ಎಂಬುದು ಗೊತ್ತಾಗಿ ದೆ. ಅಪರಾಧ ಕೃತ್ಯಕ್ಕೆ ಬಳಸಿದ ವಿಷದ ಬಾಟಲಿಗಳು, ಸಿರಿಂಜ್, ಮೊಬೈಲ್ ಮತ್ತು ಇತರ ವಸ್ತುಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

## ಜೈಲಿನಿಂದ ಹೊರಬಂದು 'ಓಂ ನಮಃ ಶಿವಾಯ' ಎಂದ ನೀಲಣ್ಣವರ

**ಬೆಳಗಾವಿ ವಾರ್ತೆ ಬೆಳಗಾವಿ:** ಶಿವಂ ಅಸೋಸಿಯೇಟ್ಸ್ ಕಂಪನಿಗೆ ಸಂಬಂಧಿಸಿದ ವಂಚನೆ ಪ್ರಕರಣದಲ್ಲಿ ಬಂಧಿತರಾಗಿದ್ದ ಶಿವಾನಂದ ನೀಲಣ್ಣವರ್ ಅವರಿಗೆ ಬೆಂಗಳೂರಿನ 92ನೇ ಸಿಟಿ ಸಿವಿಲ್ ಮತ್ತು ಸೆಷನ್ಸ್ ಕೋರ್ಟ್ ಮಧ್ಯಂತರ ಜಾಮೀನು ಮಂಜೂರು ಮಾಡಿದ ಹಿನ್ನೆಲೆಯಲ್ಲಿ ಸೋಮವಾರ ರಾತ್ರಿ ಹಿಂಡಲಗಾ ಜೈಲಿನಿಂದ ಬಿಡುಗಡೆ ಮಾಡಲಾಗಿದೆ.

ಮೇ 15ರಂದು ಮಾಳಮಾರುತಿ ಪೊಲೀಸರು ಶಿವಾನಂದ ನೀಲಣ್ಣವರ್ ಅವರನ್ನು ಬಂಧಿಸಿದ್ದರು. ಬಳಿಕ ಪ್ರಕರಣವನ್ನು ಸಿಐಡಿಗೆ ವರ್ಗಾವಣೆ ಮಾಡಲಾಗಿತ್ತು. ಜೂನ್ 12ರಂದು ನ್ಯಾಯಾಲಯ ಮಧ್ಯಂತರ ಜಾಮೀನು ಮಂಜೂರು ಮಾಡಿದ ಹಿನ್ನೆಲೆಯಲ್ಲಿ ಹಿಂಡಲಗಾ ಜೈಲಿನಿಂದ ಅವರು ಬಿಡುಗಡೆಯಾದರು.

ಜೈಲಿನಿಂದ ಹೊರಬಂದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಶಿವಾನಂದ ನೀಲಣ್ಣವರ್, 'ಓಂ ನಮಃ ಶಿವಾಯ ಎಲ್ಲರಿಗೂ ಒಳ್ಳೆಯದಾಗಬೇಕು ಎಂದು ಬಯಸುವ ವ್ಯಕ್ತಿ ನಾನು. ಬೇರೆ



ಏನೂ ಹೇಳುವುದಿಲ್ಲ' ಎಂದು ಪ್ರತಿಕ್ರಿಯಿಸಿದರು.

ನ್ಯಾಯಾಲಯ ಜಾಮೀನಿಗೆ ಹಲವು ಷರತ್ತುಗಳನ್ನು ವಿಧಿಸಿದ್ದು, ಜೂನ್ 27ರಂದು ಕೋರ್ಟ್‌ಗೆ ಹಾಜರಾಗುವಂತೆ ಸೂಚಿಸಿದೆ. ಅಲ್ಲದೆ ಮೂರು ಲಕ್ಷ ರೂಪಾಯಿ ಬಾಂಡ್ ಶ್ಯೂರಿಟಿ, ಓರ್ವ ಜಾಮೀನುದಾರರನ್ನು ಒದಗಿಸುವುದು, ತನಿಖಾಧಿಕಾರಿಗೆ ಸಹಕರಿಸುವುದು ಹಾಗೂ ದೇಶ ತೊರೆಯಬಾರದು ಎಂಬ ಷರತ್ತುಗಳನ್ನು ವಿಧಿಸಿ ಮಧ್ಯಂತರ ಜಾಮೀನು ನೀಡಲಾಗಿದೆ.

ಇದೇ ವೇಳೆ ಸುದ್ದಿಗಾರರು ಮಾತನಾಡಲು ಪ್ರಯತ್ನಿಸಿದಾಗ ಓಂ ನಮ ಶಿವಾಯ ಎಂದಷ್ಟೆ ಹೇಳಿ ಕೈ ಮುಗಿದು ಮುಂದೆ ನಡೆದರು.

# ಕಾನೂನು ಅರಿವು ಕಾರ್ಯಕ್ರಮ



**ಬೆಳಗಾವಿ ವಾರ್ತೆ ಧಾರವಾಡ:** ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ಶ್ರೀಮತಿ ವಿದ್ಯಾ ಪಿ ಹಂಚಿನಮನಿ, ಪದವಿ ಪೂರ್ವ ವಿಜ್ಞಾನ ಕಾಲೇಜು, ಧಾರವಾಡ ಇವರ ಸಂಯುಕ್ತಾಶ್ರಯದಲ್ಲಿ ಪೊಕ್ಸೊ ಕಾಯಿದೆ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಕಾನೂನು ಅರಿವು ಕಾರ್ಯಕ್ರಮ ಶ್ರೀಮತಿ ವಿದ್ಯಾ ಪಿ ಹಂಚಿನಮನಿ, ಪದವಿ ಪೂರ್ವ ವಿಜ್ಞಾನ ಕಾಲೇಜು, ಧಾರವಾಡ ಇಲ್ಲಿ ನಡೆಯಿತು. ಉದ್ಘಾಟನೆಯನ್ನು ಎನ್.ವಿ.ವಿಜಯ, ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡ ಇವರು ಸಸಿಗೆ ನೀರು ಹಾಕುವುದರ ಮೂಲಕ ನೆರವೇರಿಸಿದರು. ಮಾದಕ ದ್ರವ್ಯ ವ್ಯಸನದಿಂದ ಇಂದಿನ ಯುವಕರ ಮೇಲೆ ಉಂಟಾಗುವ ದುಷ್ಪರಿಣಾಮದ ಕುರಿತು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಎಚ್. ಶಶಿಧರ ಶೆಟ್ಟಿ, ಗೌರವಾನ್ವಿತ ಜಿಲ್ಲಾ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರು ಭಾಗವಹಿಸಿ ಪೊಕ್ಸೋ ಕಾಯಿದೆಯ ಕುರಿತು ಮಾತನಾಡಿದರು. ಅಲ್ಲಪ್ಪ ಎಂ ಬಡಿಗೇರ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡ ಹಾಗೂ ಉಮೇಶ ಬೊಮ್ಮಕ್ಕನವರ, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಇವರು ಮುಖ್ಯ ಅತಿಥಿಗಳಾಗಿ ಹಾಜರಿದ್ದರು. ಅಧ್ಯಕ್ಷತೆಯನ್ನು ರಾಜು ಎಸ್ ಕಡೆಮನಿ, ಪ್ರಾಂಶುಪಾಲರು, ವಿ.ಪಿ.ಎಚ್ ಪಿಯು ಕಾಲೇಜು, ಧಾರವಾಡ ಇವರು ವಹಿಸಿದ್ದರು.

ಬಾಲಸುಬ್ರಹ್ಮಣ್ಯ, ಸಾರ್ವಜನಿಕ ಸಂಪರ್ಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಕಾಲೇಜಿನ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಪಿ.ಎಂ. ಶ್ರೀ ಸ್ಕೂಲ್ ಜವಾಹರ ನವೋದಯ ವಿದ್ಯಾಲಯ ದಲ್ಲಿ 11ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** 2026-27 ನೇ ಶೈಕ್ಷಣಿಕ ಸಾಲಿನ 11ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. 2025-26ನೇ ಸಾಲಿನಲ್ಲಿ 10ನೇ ತರಗತಿ ಪರೀಕ್ಷೆಯಲ್ಲಿ ಕನಿಷ್ಠ ಶೇ. 60 ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಕಲಾ ವಿಭಾಗಕ್ಕೆ, ಕನಿಷ್ಠ ಶೇ. 60 ಅಂಕಗಳನ್ನು ಪಡೆದಿರಬೇಕು.

ವಿದ್ಯಾರ್ಥಿಗಳ ಜನ್ಮ ದಿನಾಂಕವು ಜೂನ್ 01, 2009 ರಿಂದ ಜುಲೈ 31, 2011 ರ ನಡುವೆ ಇರಬೇಕು. ಕಲಾ ವಿಭಾಗಗಳಲ್ಲಿ ಪ್ರವೇಶ ಅವಕಾಶವಿದೆ. ಅರ್ಜಿ ನಮೂನೆಗಳನ್ನು ವಿದ್ಯಾಲಯದ ಕಚೇರಿಯಿಂದ ಅಥವಾ https://navodaya.gov.in ವೆಬ್‌ಸೈಟ್‌ನಿಂದ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಜೂನ್ 25, 2026 ರೊಳಗಾಗಿ ವಿದ್ಯಾಲಯಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7411533747, 7337766555, 9353523752 ಗೆ ಸಂಪರ್ಕಿಸಬಹುದು ಎಂದು ಪಿ.ಎಂ. ಶ್ರೀ ಸ್ಕೂಲ್ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನವೋದಯ ವಿದ್ಯಾಲಯಕ್ಕೆ ಜಿಲ್ಲಾಧಿಕಾರಿ ಭೇಟಿ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಜವಾಹರ್ ನವೋದಯ ವಿದ್ಯಾಲಯಕ್ಕೆ ಜೂನ್ 9 ರಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಹಾಗೂ ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ ಅವರು ಭೇಟಿ ನೀಡಿ, ವಿದ್ಯಾಲಯದ ವಿವಿಧ ಚಟುವಟಿಕೆಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ವಿದ್ಯಾಲಯದ ತರಗತಿ ಕೊಠಡಿಗಳು, ಗ್ರಂಥಾಲಯ, ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಹಪಠ್ಯ ಚಟುವಟಿಕೆಗಳು, ಅಡುಗೆಮನೆ, ದಿನಸಿ ಸಾಮಗ್ರಿಗಳ ಉಗ್ರಾಣ, ವಿದ್ಯಾರ್ಥಿ ವಸತಿ ನಿಲಯಗಳು, ಕ್ರೀಡಾಂಗಣ ಹಾಗೂ ಇತರೆ ಸೌಲಭ್ಯಗಳನ್ನು ಕೂಲಂಕುಶವಾಗಿ ಪರಿಶೀಲಿಸಿ ಅಗತ್ಯ ಮಾಹಿತಿಯನ್ನು ಪಡೆದು, ಅಭಿವೃದ್ಧಿಗೆ ಸಂಬಂಧಿಸಿದ ಹಲವು ಸಲಹೆಗಳನ್ನು ನೀಡಿದರು.

ನಂತರ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದ ಜಿಲ್ಲಾಧಿಕಾರಿಗಳು ಮತ್ತು ಇತರ ಅಧಿಕಾರಿಗಳು, ವಿದ್ಯಾರ್ಥಿಗಳ ಕನಸುಗಳು, ಗುರಿಗಳು ಹಾಗೂ ಭವಿಷ್ಯದ ಯೋಜನೆಗಳ ಕುರಿತು ಸಂವಾದ ನಡೆಸಿದರು. ತಮ್ಮ ಸ್ಫೂರ್ತಿದಾಯಕ ಮಾತುಗಳ ಮೂಲಕ ವಿದ್ಯಾರ್ಥಿಗಳನ್ನು ಸರ್ವತೋಮುಖ ಬೆಳವಣಿಗೆ ಸಾಧಿಸಲು ಹುರಿದುಂಬಿಸಿದರು. ನಂತರ ವಿದ್ಯಾರ್ಥಿಗಳೊಂದಿಗೆ



ಕುಳಿತು ಮಧ್ಯಾಹ್ನದ ಉಪಹಾರ ಸೇವಿಸಿ, ಅವರೊಂದಿಗೆ ಆತ್ಮೀಯವಾಗಿ ಬೆರೆತು ಮಾತನಾಡಿದರು. ವಿದ್ಯಾರ್ಥಿಗಳ ಉತ್ತಮ ಭವಿಷ್ಯಕ್ಕಾಗಿ ಶುಭ ಹಾರೈಸಿ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜವಹರ್ ನವೋದಯ ವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ರಾಘವನ್ ಪಿ. ಕೆ., ಸಿಬ್ಬಂದಿ ವರ್ಗ, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಇಂದಿನ ಆಧುನಿಕ ಯುಗದಲ್ಲೂ ಯಾರೂ ಅಧ್ಯಾತ್ಮ ಮರೆಯಬಾರದು. ಮಹಾತ್ಮರು ಬೋಧಿಸುವ ಪ್ರವಚನದ ಸಾರವನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು

**ಬೆಳಗಾವಿ ವಾರ್ತೆ ಉಗರಗೋಳ:** ಇಂದಿನ ಆಧುನಿಕ ಯುಗದಲ್ಲೂ ಯಾರೂ ಅಧ್ಯಾತ್ಮ ಮರೆಯಬಾರದು. ಮಹಾತ್ಮರು ಬೋಧಿಸುವ ಪ್ರವಚನದ ಸಾರವನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಮಾಜದ ಮುಖಂಡ ಹೂವಪ್ಪ ಸಿಕ್ಕಲಗೇರ ಹೇಳಿದರು.

ಸವದತ್ತಿ ತಾಲೂಕಿನ ಉಗರಗೋಳ ಗ್ರಾಮದಲ್ಲಿ ಉಗರಗೋಳ ಸಿಕ್ಕಲಗೇರ ಓಣಿಯ ಶ್ರೀಕನಕಮ್ಮಾ ದೇವಿ ಸೇವಾ ಸಂಘದವರು ಮಂಗಳವಾರ ಜೂನ 16 ರಿಂದ ಜೂನ 20 ಶನಿವಾರ 5 ದಿನಗಳವರೆಗೆ ಹಮ್ಮಿಕೊಂಡ ಶ್ರೀಗಾಳಿದುರ್ಗಮ್ಮದೇವಿ(ಶ್ರೀಕನಕಮ್ಮದೇವಿ)ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು. ಪಾಲಕರು ತಮ್ಮ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ, ಉತ್ತಮ ಸಂಸ್ಕಾರ ನೀಡಬೇಕು ಎಂದು ಕರೆಕೊಟ್ಟರು.

ಪೊಲೀಸ್ ರೇಣಪ್ಪ ಸಿಕ್ಕಲಗೇರ ಮಾತನಾಡಿ ಶರಣರ ಆಧ್ಯಾತ್ಮಿಕ ನುಡಿಗಳು ಜೀವನವನ್ನು ಸುಂದರವಾಗಿಸುತ್ತದೆ. ಅನ್ನ, ನೀರು, ಆಶ್ರಯದಿಂದ ಮಾತ್ರ ಬದುಕು



ಉಗರಗೋಳ: ಗ್ರಾಮದಲ್ಲಿ ಶ್ರೀಗಾಳಿದುರ್ಗಮ್ಮದೇವಿ(ಶ್ರೀಕನಕಮ್ಮದೇವಿ)ಜಾತ್ರಾ ಮಹೋತ್ಸವದಲ್ಲಿ. ಭಾಜಾಬಜಂತ್ರಿ, ಸುಮಂಗಲಿಯರ ಆರತಿಯೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಪೂರ್ಣವಾಗುವುದಿಲ್ಲ. ಆಧ್ಯಾತ್ಮಿಕ ನುಡಿಗಳನ್ನು ಆಲಿಸಿದರೆ ಬದುಕು ಸಾರ್ಥಕಮಯವಾಗುತ್ತದೆ ಎಂದು ನುಡಿದರು.

ಉಗರಗೋಳ ಗ್ರಾಮದ ಸುಮಂಗಲಿಯರ ಆರತಿಯೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ನಾಸೀಕ್ ಡೋಲ್, ಡೊಳ್ಳು ಕುಣಿತ, ಕಥಕ್ಕಳಿ ಜಾನಪದ ನೃತ್ಯ ಹಾಗೂ ಭಂಡಾರದ ಹೊನ್ನಾಟ ಜಾತ್ರಾ ಮಹೋತ್ಸವಕ್ಕೆ ರಂಗು ತಂದಿತ್ತು.

ಹುಬ್ಬಳ್ಳಿಯ ರಾಜಪ್ಪ ಗಬ್ಬೂರ, ಧಾರವಾಡದ ಶರಣಪ್ಪ ಯಮನೂರ, ಕನಕಪ್ಪ ಸಿಕ್ಕಲಿಗೇರ, ಹೂವಪ್ಪ ಸಿಕ್ಕಲಿಗೇರ, ಮುಖಪ್ಪ ಸಿಕ್ಕಲಿಗೇರ, ಗಾಳಪ್ಪ ಸಿಕ್ಕಲಿಗೇರ, ಮಂಜುನಾಥ ಸಿಕ್ಕಲಿಗೇರ, ರಾಜಪ್ಪ ಸಿಕ್ಕಲಿಗೇರ, ಲಕ್ಷ್ಮಣ ಸಿಕ್ಕಲಿಗೇರ, ನಭಿ ಸಿಕ್ಕಲಿಗೇರ ಗ್ರಾಮದ ಸಮಸ್ಥ ಗುರುಹಿರಿಯರು, ಅಖಿಲ ಸಿಕ್ಕಲಗೇರ ಸಮಾಜದ ಗುರುಹಿರಿಯರು ಜಾತ್ರೆಯಲ್ಲಿ ಪಾಲ್ಗೊಂಡಿದ್ದರು.

# ಸ್ವಚ್ಛತೆ ದೇವರಿಗೆ ಸಮ; ಘನ ತ್ಯಾಜ್ಯ ನಿರ್ವಹಣೆಯಲ್ಲಿ ಎಲ್ಲರೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

**ಬೆಳಗಾವಿ ವಾರ್ತೆ ಗದಗ:** ಸ್ವಚ್ಛತೆ ದೇವರಿಗೆ ಸಮಾನವಾಗಿದ್ದು, ನಮ್ಮ ದೇಹವನ್ನು ಹೇಗೆ ಸ್ವಚ್ಛವಾಗಿ ಇಟ್ಟುಕೊಳ್ಳುತ್ತೇವೆಯೋ ಅದೇ ರೀತಿ ನಮ್ಮ ಸುತ್ತ ಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಸ್ವಚ್ಛ ವಾತಾವರಣದಿಂದ ಅನಾರೋಗ್ಯವನ್ನು ದೂರವಿಡಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ನಗರದ ಜಿಲ್ಲಾಡಳಿತ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಹಾಗೂ ನಗರಸಭೆ ಗದಗ-ಬೆಟಗೇರಿ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಮಂಗಳವಾರ (ಜೂನ್ 16) ರಂದು ಆಯೋಜಿಸಿದ್ದ ಪೌರಕಾರ್ಮಿಕರಿಗೆ ಹಾಗೂ ಸ್ವಚ್ಛತಾ ಕೆಲಸಗಾರರಿಗೆ ಘನತ್ಯಾಜ್ಯ ವಸ್ತು ನಿರ್ವಹಣೆ ನಿಯಮಗಳು-2026 ಮತ್ತು ಸ್ವಚ್ಛತಾ ಪರಿಕರಗಳ ಬಳಕೆ ಕುರಿತು ತಿಳುವಳಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ದಿನಗಳಲ್ಲಿ ಘನ ತ್ಯಾಜ್ಯ ನಿರ್ವಹಣೆ ಅತ್ಯಂತ ಮಹತ್ವದ ವಿಷಯವಾಗಿದ್ದು, ಕಸವನ್ನು ಹಸಿಕಸ, ಒಣಕಸ, ಸ್ಯಾನಿಟರಿ ತ್ಯಾಜ್ಯ ಹಾಗೂ ವಿಶೇಷ ಕಾಳಜಿ ತ್ಯಾಜ್ಯ ಎಂಬ ನಾಲ್ಕು ವಿಭಾಗಗಳಲ್ಲಿ ವಿಂಗಡಿಸಲಾಗುತ್ತಿದೆ.

ತ್ಯಾಜ್ಯವನ್ನು ಮೂಲದಲ್ಲಿಯೇ ಪ್ರತ್ಯೇಕಿಸುವುದರಿಂದ ಅದರ ಸಮರ್ಪಕ ನಿರ್ವಹಣೆ ಸಾಧ್ಯವಾಗುತ್ತದೆ. ಸಾಮಾನ್ಯವಾಗಿ ಹೆಚ್ಚು ನೀರು ಬಳಸುವ ಪ್ರದೇಶಗಳಲ್ಲಿ ಹೆಚ್ಚಿನ ಪ್ರಮಾಣದ ಘನ ತ್ಯಾಜ್ಯ ಉತ್ಪತ್ತಿಯಾಗುತ್ತದೆ. ಇಂತಹ ಸ್ಥಳಗಳತ್ತ ವಿಶೇಷ ಗಮನ ಹರಿಸಿ ವೈಜ್ಞಾನಿಕ ರೀತಿಯಲ್ಲಿ ತ್ಯಾಜ್ಯ ನಿರ್ವಹಣೆ ಮಾಡಬೇಕಾಗಿದೆ ಎಂದು ಅವರು ಹೇಳಿದರು.

ಘನ ತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಉದ್ದೇಶದಿಂದ ಸರ್ಕಾರ ನಿಯಮಗಳನ್ನು ರೂಪಿಸಿದ್ದು, ಎಲ್ಲರೂ ಅವುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ನಗರಗಳ ಬೆಳವಣಿಗೆ ಮತ್ತು ಜನಸಂಖ್ಯೆ ಹೆಚ್ಚಳದೊಂದಿಗೆ ತ್ಯಾಜ್ಯದ ಪ್ರಮಾಣವೂ ಹೆಚ್ಚುತ್ತಿದ್ದು, ಅದರ ವೈಜ್ಞಾನಿಕ ವಿಲೇವಾರಿ ಪರಿಸರ ಸಂರಕ್ಷಣೆ ಮತ್ತು ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಅತ್ಯಗತ್ಯವಾಗಿದೆ ಎಂದರು.

ತ್ಯಾಜ್ಯವನ್ನು ಮೂಲದಲ್ಲಿಯೇ ವಿಂಗಡಿಸುವುದು, ಮರುಬಳಕೆ ಹಾಗೂ ಮರುಸಂಸ್ಕರಣೆಗೆ ಆದ್ಯತೆ ನೀಡುವುದರಿಂದ ಸ್ವಚ್ಛ ಮತ್ತು ಆರೋಗ್ಯಕರ ಪರಿಸರ ನಿರ್ಮಾಣ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸ್ವಚ್ಛತೆ ಮತ್ತು ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಕೆಲಸಗಾರರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರು ಪ್ರತಿನಿತ್ಯ ಹಲವಾರು ಸವಾಲಿನ ಪರಿಸ್ಥಿತಿಗಳಲ್ಲಿ ಕಾರ್ಯನಿರ್ವಹಿಸುತ್ತಾರೆ. ತ್ಯಾಜ್ಯ ಸಂಗ್ರಹಣೆ, ಚರಂಡಿ ಸ್ವಚ್ಛತೆ ಹಾಗೂ ತ್ಯಾಜ್ಯ ವಿಂಗಡಣೆ ವೇಳೆ ಆರೋಗ್ಯ ಮತ್ತು ಸುರಕ್ಷತೆಗೆ ಸಂಬಂಧಿಸಿದ ಅಪಾಯಗಳು ಎದುರಾಗುತ್ತವೆ. ಆದ್ದರಿಂದ ಕೈಗವಸು, ಮುಖಗವಸು, ಸುರಕ್ಷತಾ ಬೂಟು, ರಿಫ್ಲೆಕ್ಟಿವ್ ಜಾಕೆಟ್ ಸೇರಿದಂತೆ ಅಗತ್ಯ ರಕ್ಷಣಾ ಸಾಧನಗಳನ್ನು ಕಡ್ಡಾಯವಾಗಿ ಬಳಸಬೇಕು. ಇದರಿಂದ ಅಪಘಾತಗಳು ಮತ್ತು ಸೋಂಕುಜನ್ಯ ಕಾಯಿಲೆಗಳಿಂದ ರಕ್ಷಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಜಿಲ್ಲಾ ಕಾನೂನು ಸೇವಾ ಪ್ರಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ದಿವಾಣಿ ನ್ಯಾಯದೀಶ ಸಿ.ಎಸ್. ಶಿವನಗೌಡ್ರ ಮಾತನಾಡಿ ಸಮಾಜದ ಸ್ವಚ್ಛತೆಗೆ ಶ್ರಮಿಸುವ ಪೌರಕಾರ್ಮಿಕರಿಗಾಗಿ ಇಂತಹ ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಅತ್ಯಂತ ಶ್ಲಾಘನೀಯ. ಪೌರಕಾರ್ಮಿಕರ ಸಮಸ್ಯೆಗಳನ್ನು ಕೇವಲ ದೂರು-ದುಮ್ಮಾನಗಳ ಮೂಲಕ ನೋಡುವುದಕ್ಕಿಂತ, ಅವರ ನಿಜವಾದ ಸಮಸ್ಯೆಗಳೇನು ಮತ್ತು ಅದಕ್ಕೆ ಕಾನೂನಾತ್ಮಕ ಪರಿಹಾರಗಳೇನು ಎಂಬುದನ್ನು ಮನವರಿಕೆ ಮಾಡಿಕೊಡುವುದು ಇಂದಿನ ಅಗತ್ಯವಾಗಿದೆ," ಎಂದು ತಿಳಿಸಿದರು.

**2013ರ ಕಾಯ್ದೆ ಮತ್ತು ಪೌರಕಾರ್ಮಿಕರ ಹಕ್ಕುಗಳು:**

"2013ಕ್ಕೂ ಮುನ್ನ ಪೌರಕಾರ್ಮಿಕರ ಹಕ್ಕುಗಳನ್ನು ರಕ್ಷಿಸುವ ಕಟ್ಟುನಿಟ್ಟಾದ ಕಾನೂನು ಇರಲಿಲ್ಲ. ಆದರೆ 2013 ರಲ್ಲಿ ಜಾರಿಗೆ ಬಂದ 'ಮ್ಯಾನುವಲ್ ಸ್ಕ್ಯಾವೆಂಜರ್ಸ್ ನಿಷೇಧ ಮತ್ತು ಪುನರ್ವಸತಿ ಕಾಯ್ದೆ'ಯು (Prohibition of Employment as Manual Scavengers and their Rehabilitation Act, 2013) ಮನುಷ್ಯನೇ ಮನುಷ್ಯನ ಮಲ ಹೊರುವುದನ್ನು ಮತ್ತು ಸುರಕ್ಷತಾ ಪರಿಕರಗಳಿಲ್ಲದೆ ಅಪಾಯಕಾರಿ ಸ್ಥಳಗಳ



ಕಸದ ಗುಂಡಿಗೆ ಇಳಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಈ ಕಾಯ್ದೆಯಡಿ ಪ್ರತಿಯೊಂದು ಜಿಲ್ಲೆ ಮತ್ತು ತಾಲೂಕುಗಳಲ್ಲಿ ಮ್ಯಾನುವಲ್ ಸ್ಕ್ಯಾವೆಂಜರ್ಸ್‌ಗಳ ಸಮೀಕ್ಷೆ ನಡೆಸಿ, ಅವರನ್ನು ಗುರುತಿಸಿ, ಕೇವಲ ಗುರುತಿಸುವುದಷ್ಟೇ ಅಲ್ಲದೆ ಅವರಿಗೆ ಕಡ್ಡಾಯವಾಗಿ ಪುನರ್ವಸತಿ ಕಲ್ಪಿಸಬೇಕು ಹಾಗೂ ಪರ್ಯಾಯ ಉದ್ಯೋಗಕ್ಕಾಗಿ ಸೂಕ್ತ ತರಬೇತಿಯನ್ನು ನೀಡಬೇಕು ಎಂದು ಕಾಯ್ದೆ ಸ್ಪಷ್ಟಪಡಿಸುತ್ತದೆ. ಈ ನಿಯಮವನ್ನು ಉಲ್ಲಂಘಿಸಿ ಯಾರಾದರೂ ಪೌರಕಾರ್ಮಿಕರನ್ನು ಇಂತಹ ಅಪಾಯಕಾರಿ ಕೆಲಸಗಳಿಗೆ ಒತ್ತಾಯಿಸಿದರೆ ಅವರಿಗೆ 2 ರಿಂದ 5 ವರ್ಷಗಳವರೆಗೆ ಕಠಿಣ ಶಿಕ್ಷೆ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ," ಎಂದು ಅವರು ವಿವರಿಸಿದರು.

"ಪೌರಕಾರ್ಮಿಕರ ಕ್ಷೇಮಾಭಿವೃದ್ಧಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಸದಾ ಸಿದ್ಧವಿದೆ. ಸರ್ಕಾರದಿಂದ ಸಿಗುವ ಸೌಲತ್ತುಗಳಾದ ಶೇಕಡಾ 50ರಷ್ಟು ಸಹಾಯಧನದೊಂದಿಗೆ ಸಾಲ ಸೌಲಭ್ಯ, ವಸತಿ ಸೌಲಭ್ಯ ಅಥವಾ ಒನ್-ಟೈಮ್ ಅಸಿಸ್ಟೆನ್ಸ್ ಮುಂತಾದ ಯೋಜನೆಗಳ ಲಾಭ ಪಡೆಯಲು ಯಾವುದೇ ತೊಂದರೆಯಾಗಿದ್ದಲ್ಲಿ, ಅಥವಾ ನಿಮ್ಮ ಹಕ್ಕುಗಳ ಉಲ್ಲಂಘನೆಯಾಗಿದ್ದಲ್ಲಿ ಪ್ರಾಧಿಕಾರವನ್ನು ಸಂಪರ್ಕಿಸಬಹುದು. ಪ್ರಾಧಿಕಾರದ 'ಫ್ರಂಟ್ ಆಫೀಸ್' ಮೂಲಕ ಪೌರಕಾರ್ಮಿಕರಿಗೆ ಉಚಿತವಾಗಿ ವಕೀಲರ ಸೌಲಭ್ಯ ಹಾಗೂ ಕಾನೂನು ನೆರವನ್ನು ಒದಗಿಸಲಾಗುವುದು. ನಿಮ್ಮ ಹಕ್ಕುಗಳಿಗಾಗಿ ನ್ಯಾಯಯುತವಾಗಿ ಹೋರಾಡುವ ಮನಸ್ಥಿತಿಯನ್ನು ಬೆಳೆಸಿಕೊಳ್ಳಿ," ಎಂದು ಕರೆ ನೀಡಿದರು.

"ನಗರದ ಪ್ರತಿಯೊಬ್ಬ ನಾಗರಿಕನೂ ನೆಮ್ಮದಿಯಿಂದ ಉಸಿರಾಡಲು ಮತ್ತು ಸ್ವಚ್ಛವಾಗಿ ಬದುಕಲು ಪೌರಕಾರ್ಮಿಕರೇ ಕಾರಣ. ಹೀಗಾಗಿ ನಿಮ್ಮ ಆರೋಗ್ಯದ ಕಡೆಗೆ ನೀವು ಹೆಚ್ಚಿನ ಗಮನ ಹರಿಸಬೇಕು. ಯಾವುದೇ ಕಾರಣಕ್ಕೂ ಸುರಕ್ಷತಾ ಉಪಕರಣಗಳಿಲ್ಲದೆ ನೇರವಾಗಿ ಕೈಗಳಿಂದ ಕಸವನ್ನು ಮುಟ್ಟಬೇಡಿ. ಅಧಿಕಾರಿಗಳು ಒದಗಿಸುವ ಮಾಸ್ಕ್, ಗ್ಲೌಸ್ ಸೇರಿದಂತೆ ಆಧುನಿಕ ಯಂತ್ರೋಪಕರಣಗಳನ್ನು ಕಡ್ಡಾಯವಾಗಿ ಬಳಸಿ ಕೆಲಸ ಮಾಡಿ. ಇದರೊಂದಿಗೆ, ನಿಮ್ಮ ಆರೋಗ್ಯ ಮತ್ತು ಮಕ್ಕಳಿಗೆ ಶಿಕ್ಷಣಕ್ಕೆ ಆದ್ಯತೆ ನೀಡಿ ಕಡ್ಡಾಯವಾಗಿ ಉತ್ತಮ ಶಿಕ್ಷಣವನ್ನು ಕೊಡಿಸಿ. ಡಾ. ಬಿ.ಆರ್. ಅಂಬೇಡ್ಕರ್ ಅವರು ಹೇಳಿದಂತೆ ಸಮಾಜದ ಮುಖ್ಯವಾಹಿನಿಗೆ ಬರಲು ಶಿಕ್ಷಣವೇ ಏಕೈಕ ಮಾರ್ಗ. ಮುಂದಿನ ಪೀಳಿಗೆಯು ಸಮಾಜದ ಎಲ್ಲಾ ಉನ್ನತ ಸ್ಥಾನಗಳಲ್ಲಿ ಗುರುತಿಸಿಕೊಳ್ಳುವಂತಾಗಬೇಕು," ಎಂದು ಆಶಯ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಪೌರಕಾರ್ಮಿಕರೊಬ್ಬರು ಕಳೆದ 20 ದಿನಗಳಿಂದ ಸಂಬಳ ಆಗದಿರುವ ಬಗ್ಗೆ ನ್ಯಾಯಾಧೀಶರ ಗಮನಕ್ಕೆ ತಂದಾಗ, ತಕ್ಷಣವೇ ಸ್ಪಂದಿಸಿದ ನ್ಯಾಯಾಧೀಶರು, "ಯಾವುದೇ ತಾಂತ್ರಿಕ ತೊಂದರೆಗಳಿದ್ದಲ್ಲಿ ಅಧಿಕಾರಿಗಳು ಪೌರಕಾರ್ಮಿಕರಿಗೆ ಸೂಕ್ತ ಮಾಹಿತಿ ನೀಡಿ ಅದನ್ನು ಬಗೆಹರಿಸಬೇಕು. ಪೌರಕಾರ್ಮಿಕರ ವೇತನ ಪಾವತಿಯಲ್ಲಿ ವಿಳಂಬ ಧೋರಣೆ ತೋರಬಾರದು. ಒಂದು ವೇಳೆ ಜಿಲ್ಲಾ ಮಟ್ಟದಲ್ಲಿ ಸಮಸ್ಯೆ ಬಗೆಹರಿಯದಿದ್ದರೆ ಅದನ್ನು ರಾಜ್ಯ ಸರ್ಕಾರದ ಗಮನಕ್ಕೆ ತಂದು ಮನವರಿಕೆ ಮಾಡಿಕೊಡಬೇಕು," ಎಂದು ಪುರಸಭೆಯ ಮುಖ್ಯ ಅಧಿಕಾರಿಗೆ (Chief Officer) ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಲ್ಲದೆ, ಕಸ ವಿಂಗಡಣೆ (ಒಣ ಕಸ ಮತ್ತು ಹಸಿ ಕಸ) ಮಾಡುವುದು ಸಾರ್ವಜನಿಕರ ಕರ್ತವ್ಯವಾಗಿದ್ದು, ಪೌರಕಾರ್ಮಿಕರಿಗೆ ಸಹಕರಿಸುವಂತೆ ಜನರಲ್ಲಿ ಜಾಗೃತಿ ಮೂಡಿಸಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಮಾತನಾಡಿ, ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ವಿವಿಧ ಸೌಲಭ್ಯಗಳನ್ನು ಜಾರಿಗೊಳಿಸಿದೆ ಎಂದು ತಿಳಿಸಿದರು. ಪೌರಕಾರ್ಮಿಕರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕುವಂತೆ ವಿಶೇಷ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ವಸತಿಯುತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ (ಖಛಿಥಿಂಟಚಿಡ್ಠಿ) ಹಾಗೂ ಪ್ರೋತ್ಸಾಹ ಧನ (ಕಡಿದಜ ಒಂಟಿಜಥ) ನೀಡುವ ಮೂಲಕ ಉನ್ನತ ಶಿಕ್ಷಣಕ್ಕೆ ಉತ್ತೇಜನ ನೀಡಲಾಗುತ್ತಿದೆ ಎಂದು ಹೇಳಿದರು.

ಪೌರಕಾರ್ಮಿಕರು ದಿನನಿತ್ಯ ವಿರಾಮವಿಲ್ಲದೆ ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಶ್ರಮಿಸುತ್ತಿದ್ದಾರೆ. ಅವರ ಆರೋಗ್ಯದ ಬಗ್ಗೆ ಸರ್ಕಾರ ವಿಶೇಷ ಕಾಳಜಿ ವಹಿಸಿದ್ದು, ನಿಯಮಿತ ಆರೋಗ್ಯ ತಪಾಸಣೆ, ಅಗತ್ಯ ಚಿಕಿತ್ಸಾ ಸೌಲಭ್ಯ ಹಾಗೂ ಸುರಕ್ಷತಾ ಪರಿಕರಗಳನ್ನು ಒದಗಿಸಲಾಗುತ್ತಿದೆ. ಕಾರ್ಮಿಕರು ಈ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ತಮ್ಮ ಸುರಕ್ಷತೆಗೆ ಹೆಚ್ಚಿನ ಗಮನ ನೀಡಬೇಕು ಎಂದು ಸಲಹೆ ನೀಡಿದರು.

ನಿಮ್ಮ ಆರೋಗ್ಯದ ಜೊತೆಗೆ ಸಮಾಜದ ಆರೋಗ್ಯ ರಕ್ಷಣೆಯ ಜವಾಬ್ದಾರಿಯೂ ನಮ್ಮೆಲ್ಲರ ಮೇಲಿದೆ. ಸ್ವಚ್ಛತೆ ಮತ್ತು ಆರೋಗ್ಯಕರ ಪರಿಸರ ನಿರ್ಮಾಣದಲ್ಲಿ ಎಲ್ಲರೂ ಕೈಜೋಡಿಸಿ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸೋಣ ಎಂದು ಅವರು ಕರೆ ನೀಡಿದರು.

ಸಫಾಯಿ ಕರ್ಮಚಾರಿ ಸಂಘದ ನಾಮನಿರ್ದೇಶಿತ ಸದಸ್ಯ ಎಸ್. ಎನ್. ಬಳ್ಳಾರಿ ಮಾತನಾಡಿ ಸಮಾಜದಲ್ಲಿ ತಲೆ ಎತ್ತಿ ಬಾಳುವಂತೆ ಮಾಡಿದ ಮಹಾತ್ಮರ ಆಶಯದಂತೆ ಪೌರಕಾರ್ಮಿಕರ ಬದುಕಿಗೆ ಭದ್ರತೆ ಹಾಗೂ ಸ್ವಾಭಿಮಾನವನ್ನು ತಂದುಕೊಡುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ" ಎಂದು ತಿಳಿಸಿದರು.

ಪೌರಕಾರ್ಮಿಕರಿಗೆ ಕಾಲಕಾಲಕ್ಕೆ ಸರಿಯಾಗಿ ವೇತನ ಪಾವತಿಯಾಗುತ್ತಿಲ್ಲ. ತಿಂಗಳ ಕೊನೆಯಾದರೂ ಸಂಬಳ ಸಿಗದೆ ಕಾರ್ಮಿಕರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಕನಿಷ್ಠ ವೇತನ ನಂಬಿ ಬದುಕುವ ಕುಟುಂಬಗಳ ಮಾನಸಿಕ ಸ್ಥಿತಿಯನ್ನು ಸರ್ಕಾರ ಅರ್ಥಮಾಡಿಕೊಳ್ಳಬೇಕು ಮತ್ತು ಪ್ರತಿ ತಿಂಗಳು ತಪ್ಪದೇ ಅವರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವೇತನ ಜಮಾ ಮಾಡಬೇಕು. ಸರ್ಕಾರ ನೀಡುವ ಗ್ಲೌಸ್, ಶೂ ಹಾಗೂ ಉಡುಪು (ಯೂನಿಫಾರ್ಮ್) ಸೇರಿದಂತೆ ಎಲ್ಲಾ ಸುರಕ್ಷತಾ ಪರಿಕರಗಳನ್ನು ಪೌರಕಾರ್ಮಿಕರು ಕಡ್ಡಾಯವಾಗಿ ಬಳಸಬೇಕು. ತಮ್ಮ ಆರೋಗ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಕಾರ್ಮಿಕರು ಈ ವಿಷಯದಲ್ಲಿ ಬೇಜವಾಬ್ದಾರಿತನ ತೋರಬಾರದು.

ಪೌರಕಾರ್ಮಿಕರು ಮಕ್ಕಳು ಕೇವಲ ಇದೇ ವೃತ್ತಿಗೆ ಸೀಮಿತವಾಗದೆ, ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿ ಉನ್ನತ ಶಿಕ್ಷಣ ಪಡೆದು ಕೆ.ಎ.ಎಸ್, ತಹಶೀಲ್ದಾರ್, ಪಿ.ಎಸ್.ಐ ನಂತಹ ಉನ್ನತ ಹುದ್ದೆಗಳನ್ನು ಅಲಂಕರಿಸುವ ಕನಸು ಕಾಣಬೇಕು. ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ರಾಮಕೃಷ್ಣ ಆಶ್ರಮದಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಸಿಗುವ ಶೈಕ್ಷಣಿಕ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಗದಗ-ಬೆಟಗೇರಿ ನಗರಸಭೆಯ ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿ ಮತ್ತು ಒಕಾರುಗಳನ್ನು ಬಿಡಿಸಿಕೊಡುವಲ್ಲಿ ಪೌರಕಾರ್ಮಿಕರ ಹೋರಾಟ ಮತ್ತು ಕೊಡುಗೆ ಅಪಾರವಾಗಿದೆ ಎಂಬುದನ್ನು ಇಲಾಖೆ ನೆನಪಿನಲ್ಲಿಟ್ಟುಕೊಂಡು ಕಾರ್ಮಿಕರನ್ನು ಗೌರವಯುತವಾಗಿ ನಡೆಸಿಕೊಳ್ಳಬೇಕು ಎಂದರು.

ಗದಗ ಬೆಟಗೇರಿ ನಗರಸಭೆ ಂಇಇ ( ಪರಿಸರ ) ಆನಂದ ಬದಿ ಸರ್ವರನ್ನು ಸ್ವಾಗತಿಸಿ ವಂದನಾರ್ಪಣೆ ಸಲ್ಲಿಸಿ ಕಾರ್ಯಕ್ರಮ ನಿರೂಪಿಸಿದರು.

ಈ ಕಾರ್ಯಕ್ರಮದಲ್ಲಿ ಉಪ ವಿಭಾಗಾಧಿಕಾರಿ ಗಂಗಪ್ಪ ಎಂ, ನಗರಾಭಿರುದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೊಟೂರು, ಕಾನೂನು ಸಲಹೆಗಾರ ಎಸ್.ಜಿ ಪಲ್ಲೆದ, ಪೌರಕಾರ್ಮಿಕರ ಸಂಘದ ಅಧ್ಯಕ್ಷ ಹೆಚ್.ಎಂ. ಶೆಟ್ಟಿ, ಸಂಚಾಲಕ ರಮೇಶ ಕೊಳೂರು,ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ಪೌರಕಾರ್ಮಿಕರು, ಸ್ವಚ್ಛತಾ ಕೆಲಸಗಾರರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಕಳ್ಳತನ; ಮಹಿಳಾ ಆರೋಪಿತಳ ಬಂಧನ



**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಜಿಲ್ಲೆಯ ನವಲಗುಂದ ಪೊಲೀಸ್ ಠಾಣೆಯ ಗುನ್ನಾ ನಂ: 94/ 2026 ಕಲಂ: 305 ಬಿ.ಎನ್.ಎಸ್ ನೇದ್ದರಲ್ಲಿ ಪ್ರಕರಣದಲ್ಲಿ ದಿನಾಂಕ:12/06/ 2026 ರಂದು ಪಿರ್ಯಾದಿದಾರರಾದ ಶೈಲಾ ಕೋಂ ಸಿದ್ದಯ್ಯ ಹಿರೇಮಠ, ಸಾ॥ ಬಳ್ಳೂರ ತಾ॥ ನವಲ ಗುಂದ ನೇದ್ದವರು ಠಾಣೆಗೆ ಹಾಜರಾಗಿ ಮನೆ ಕಳತವಾದ ಬಗ್ಗೆ ನೀಡಿದ ಪಿರ್ಯಾದನ್ನು ಸ್ವೀಕರಿಕೊಂಡು ಪ್ರಕರಣವನ್ನು ದಾಖಲಿಸಿ ತನಿಖೆಯನ್ನು ಕೈಕೊಂಡಿದ್ದು ಇರುತ್ತದೆ.

ಸದರ ಪ್ರಕರಣ ದಾಖಲಾದ ತಕ್ಷಣ ನವಲಗುಂದ ವೃತ್ತ ಸಿಪಿಐ ರವಿಕುಮಾರ ಕಪ್ಪತನವರ ಅವರ ನೇತೃತ್ವದಲ್ಲಿ, ಸದರ ಪ್ರಕರಣದ ತನಿಖೆ ಕೈಕೊಂಡು ನವಲಗುಂದ ಪೊಲೀಸ್ ಠಾಣೆ ಪಿಎಸ್ಐ ಜನಾರ್ಧನ ಬಿ. ಹಾಗೂ ಸಿಬ್ಬಂದಿ ಜನರನ್ನು ಒಳಗೊಂಡ ತಂಡಗಳನ್ನು ರಚಿಸಿ ನವಲಗುಂದ ತಾಲೂಕಿನ ಬಳ್ಳೂರ ಗ್ರಾಮದ ಪಿರ್ಯಾದಿದಾರರ ಮನೆಯ ಅಕ್ಕಪಕ್ಕದ ಜನರಿಗೆ ವಿಚಾರಿಸಿದ್ದರಲ್ಲಿ ಸದರಿಯವರು ನೀಡಿದ ಸುಳಿವನ್ನು ಆಧರಿಸಿ ವಿವಿದ ಆಯಾಮಗಳಲ್ಲಿ, ತನಿಖೆ ಕೈಗೊಂಡು ಸಂಶಯಾಸ್ಪದ ರೀತಿಯಲ್ಲಿ ವರ್ತಿಸಿದ ಮಹಿಳಾ ಆರೋಪಿತಳನ್ನು ವಿಚಾರಣೆಗೊಳಪಡಿಸಿದ್ದು, ವಿಚಾರಣೆ ಕಾಲಕ್ಕೆ ಕಳ್ಳತನ ಮಾಡಿರುವ ಬಗ್ಗೆ ಆರೋಪಿತಳು ಒಪ್ಪಿಕೊಂಡಿದ್ದು, ಸದ್ಯ ಆರೋಪಿತಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಆರೋಪಿತಳಿಂದ 42.79 ಗ್ರಾಂ ಬಂಗಾರದ ಆಭರಣಗಳು ಅಂದಾಜು ಕಿಮ್ಮತ್ತು 4,70,690 ರೂ ಬಂಗಾರದ ಆಭರಣಗಳನ್ನು ವಶಪಡಿಸಿಕೊಂಡಿದ್ದು ಇರುತ್ತದೆ.

ಸದರ ಪ್ರಕರಣದಲ್ಲಿ ಪೊಲೀಸ್ ಅಧೀಕ್ಷಕ ಗುಂಜನ್ ಆರ್ಯ, ಸಿಇಎನ್ ಪೊಲೀಸ್ ಠಾಣೆ ಡಿಎಸ್ಪಿ ಶಿವಾನಂದ ಕಟಗಿ, ಪೊಲೀಸ್ ಉಪಾಧೀಕ್ಷಕ ವಿನೋದ ಮುಕ್ತೇದಾರ ಅವರ ಮಾರ್ಗದರ್ಶನದಲ್ಲಿ ನವಲಗುಂದ ವೃತ್ತ ಸಿಪಿಐ ರವಿಕುಮಾರ ಕಪ್ಪತನವರ ಅವರ ನೇತೃತ್ವದಲ್ಲಿ ಪಿಎಸ್ಐ ಜನಾರ್ಧನ ಬಿ. ಹಾಗೂ ಸಿಬ್ಬಂದಿಯವರಾದ ಜಗದೀಶ ಬರಿಗಾಲ, ಸಿ.ಜಿ.ನಾಗೇಶನವರ, ಗಂಗಾಧರ ಸಣಮೇಟ, ಮುತ್ತು ಭಜಂತ್ರಿ, ಸದಾಶಿವ ಮುಳ್ಳೂರ, ಸಂತೋಷ ಸಿಂಗಣ್ಣವರ, ಸಿದ್ದಾರಾಮ ಮೇಡೆದಾರ, ಫಾರೂಖ ನದಾಫ, ಜಗದೀಶ ಅಮಾತಿ, ರೂಪಾ ನಾಂವಿ, ಪ್ರತಿಭಾ ಮಾದರ, ಸಲೀಂ ಮತ್ತೇಖಾನ ಸಿಬ್ಬಂದಿಯನ್ನೊಳಗೊಂಡ ತನಿಖಾ ತಂಡವು ಆರೋಪಿತಳನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದ್ದು ಇರುತ್ತದೆ.

ಸದರಿ ಪ್ರಕರಣದ ಆರೋಪಿತಳಿಂದ ಕಳುವಾದ ಸ್ವತ್ತನ್ನು ವಶಪಡಿಕೊಂಡು ಆ ಮೂಲಕ ಸಾರ್ವಜನಿಕ ಮೆಚ್ಚುಗೆಗೆ ಪಾತ್ರರಾದ ನವಲಗುಂದ ಪೊಲೀಸ್ ಠಾಣೆಯ ಅಧಿಕಾರಿ ಹಾಗೂ ಸಿಬ್ಬಂದಿ ಜನರ ಕಾರ್ಯ ವೈಖರಿಯನ್ನು ಹಿರಿಯ ಅಧಿಕಾರಿಗಳು ಪ್ರಸಂಶನೆ ವ್ಯಕ್ತಪಡಿಸಿರುತ್ತಾರೆ.

# ಕೈಕೊಟ್ಟ ಮಳೆ: ಭೀತಿಯಲ್ಲಿ ರೈತ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರೈತರು ರೋಹಿಣಿ ಮಳೆಗೆ ಭೂಮಿ ತೇವಾಂಶ ಗೊಂಡ ಹಿನ್ನೆಲೆಯಲ್ಲಿ ಮುಂಗಾರಿಯ ಬೆಳೆಗಳಾದ ಹೆಸರು ಹತ್ತಿ ಗೋವಿನ ಜೋಳ ಹಲಸಂದಿ ಬಿತ್ತಿದರು.

ಆದರೆ ಈಗ ಕಳೆದ ಒಂದು ವಾರದಿಂದ ಮೃಗಶಿರ ಮಳೆಯ ಕಣ್ಣು ಮುಚ್ಚಾಲೆಯಿಂದ ರೈತರು ಮೊಳಕೆ ನಾಟಿರುವ ಬೀಜಗಳು ಎಲ್ಲಿ ಒಣಗುತ್ತವೆಯೋ ಎಂಬ ಭೀತಿಯಲ್ಲಿದ್ದಾರೆ.

ಕೃಷಿ ಇಲಾಖೆಯ ಮೂಲಗಳಿಂದ ಲಭ್ಯವಾಗಿರುವ ಮಾಹಿತಿಯ ಪ್ರಕಾರ ಕಳೆದ ವರ್ಷ ಅಂದರೆ 2025 ರ ಜೂನ್ ತಿಂಗಳಲ್ಲಿ 133. 8 ಮಿಲಿ ಮೀಟರ್ ಮಳೆಯಾಗಿತ್ತು ಆದರೆ ಪ್ರಸಕ್ತ 2026ರಲ್ಲಿ ಕೇವಲ 52.1 ಮಿಲಿಮೀಟರ್ ಮಳೆಯಾಗಿದೆ. ಅಂದರೆ 81.7 ಮಿಲಿ ಮೀಟರ್ ಮಳೆ ಕೊರತೆಯಾಗಿದೆ.

ಇದರಿಂದಾಗಿ ನೀರಾವರಿ ಸೌಲಭ್ಯವಿರುವ ರೈತರು ಸ್ಪಿಂಕ್ಲರ್ ಗಳ ಮೂಲಕ ಬಿತ್ತಿದ ಬೆಳೆಯನ್ನು ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ ಇನ್ನೊಂದು ವಾರ ಮಳೆ ಏನಾದರೂ ಕೈ ಕೊಟ್ಟರೆ ಮುಂಗಾರಿನ ಹೆಸರು ಮೆಕ್ಕೆಜೋಳ ಹತ್ತಿ ಬೆಳೆಗಳ ಮೇಲೆ ಪರಿಣಾಮ ಬೀರಲಿದೆ ಎಂಬುದು ರೈತರ ಅಂಬೋಣವಾಗಿದೆ.

# ಕರ್ನಾಟಕ ಸರ್ಕಾರಿ ವಾಹನ ಚಾಲಕರ ಕೇಂದ್ರ ಸಂಘ ಬೆಂಗಳೂರು ಶಾಖೆ ಧಾರವಾಡ ಇವರ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಆಯ್ಕೆ

**ಬೆಳಗಾವಿ ವಾರ್ತೆ ಧಾರವಾಡ:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಧಾರವಾಡ ಸಭಾ ಭವನದಲ್ಲಿ ಜೂನ್ 14, 2026 ರಂದು ಕೇಂದ್ರ ಸಂಘದ ರಾಜ್ಯಾಧ್ಯಕ್ಷ ಶ್ರೀನಿವಾಸ ಅವರ ನೇತೃತ್ವದಲ್ಲಿ ಧಾರವಾಡ ಜಿಲ್ಲಾ ಕರ್ನಾಟಕ ಸರ್ಕಾರಿ ವಾಹನ ಚಾಲಕರ ಕೇಂದ್ರ ಸಂಘಕ್ಕೆ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಸಂಜೀವ ಕುಲಕರ್ಣಿ , ಉಪಾಧ್ಯಕ್ಷರಾಗಿ ಮಹೇಶ ಮೋರೆ, ಕಾರ್ಯದರ್ಶಿಯಾಗಿ ಅಬ್ದುಲರೆಹಮಾನ ಜಾಲೇಗಾರ, ಖಜಾಂಚಿಯಾಗಿ ಶ್ರೀಧರ ನಂದೇರ, ಸಹ ಕಾರ್ಯದರ್ಶಿಯಾಗಿ ಹನುಮಂತ ಬಳಗಲಿ, ಸಂಘಟನಾ ಕಾರ್ಯದರ್ಶಿಯಾಗಿ ಶಿವಾನಂದ ಚಟ್ನಾಳ, ಜಿಲ್ಲಾ ಸಂಚಾಲಕರನ್ನಾಗಿ ರಾಜು ಮಿರಜಕರ ಅವರನ್ನು ಜಿಲ್ಲಾ ಘಟಕ ಧಾರವಾಡ ಸರ್ಕಾರಿ ವಾಹನ ಚಾಲಕರ ಸಂಘಕ್ಕೆ ಆಯ್ಕೆ ಮಾಡಲಾಯಿತು.

ವಿವಿಧ ಸರ್ಕಾರಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲೆಯ ವಾಹನ ಚಾಲಕರು ಸಮನ್ವಯದಿಂದ ಕೆಲಸ ನಿರ್ವಹಿಸಬೆಕು ಎಲ್ಲರೂ ಒಗ್ಗೂಡಿ ಸಮಸ್ಯೆಗಳನ್ನು ಬಗೆಹರಿಸಿ ಹಾಗೂ ಸಂಘಟಿಸಿ ಸಂಘವನ್ನು ಬೆಳಸಬೇಕು ಎಂದು ರಾಜ್ಯ ಸರ್ಕಾರಿ ವಾಹನ ಚಾಲಕರ ಕೇಂದ್ರ ಸಂಘದ ರಾಜ್ಯಾಧ್ಯಕ್ಷರು ಶ್ರೀನಿವಾಸ ಅವರು ಹೇಳಿದರು.



ರಾಜ್ಯ ಸರ್ಕಾರಿ ನೌಕರ ಸಂಘ ಧಾರವಾಡ ಜಿಲ್ಲಾಧ್ಯಕ್ಷರಾದ ಎಸ್.ಎಫ್. ಸಿದ್ಧನಗೌಡರ ಮಾತನಾಡಿ, ಚಾಲಕರುಗಳಿಗೆ ತೊಂದರೆ ಮತ್ತು ಅನ್ಯಾಯವಾದಾಗ ಸರ್ಕಾರಿ ನೌಕರರ ಸಂಘ ಮುಂದೆ ನಿಂತು ಪ್ರತಿಭಟಿಸುತ್ತದೆ. ಸರ್ಕಾರಿ ವಾಹನ ಚಾಲಕರ ಸಂಘ ಬೆಳೆಯಲು ಅಗತ್ಯ ಸಹಕಾರ ನೀಡಿ ಎಲ್ಲ ನೌಕರ ಬಂಧುಗಳೊಂದಿಗೆ ಮುನ್ನಡೆಯುತ್ತೇವೆಂದು ತಿಳಿಸಿದರು.

ಮಾಜಿ ಜಿಲ್ಲಾಧ್ಯಕ್ಷರಾದ ಬಿ.ಡಿ.ಅಬ್ಬಿಗೇರಿ ಇವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಬಳ್ಳಾರಿ ವಾಹನ ಚಾಲಕರ ಸಂಘದ ಕಾರ್ಯದರ್ಶಿ ವೇದಮೂರ್ತಿ ಇವರು ವಂದನಾರ್ಪಣೆ ಮಾಡಿದರು.

# ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯ ಸೌಲಭ್ಯಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** 2026-27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದಿಂದ ಕ್ರಿಶ್ಚಿಯನ್ ವಿದ್ಯಾರ್ಥಿಗಳಿಗೆ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ.

2026-27ನೇ ಸಾಲಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕೆಇಎ ಸಿಇಟಿ, ನೀಟ್ ಅಥವಾ ಜೆಇಇ ಮೂಲಕ ಆಯ್ಕೆಗೊಂಡ ಎಮ್‌ಬಿಬಿಎಸ್, ಎಮ್‌ಡಿ, ಎಮ್‌ಎಸ್ ಕೋರ್ಸಗಳಿಗೆ ಸರ್ಕಾರಿ ಕಾಲೇಜು, ಖಾಸಗಿ, ಮ್ಯಾನೇಜಮೆಂಟ್ ಕೋಟಾದಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ.5.00 ಲಕ್ಷದವರೆಗೆ ಸಾಲ ನೀಡುತ್ತಿದ್ದು, ವೃತ್ತಿಪರ ಕೋರ್ಸುಗಳಾದ ಎಮ್‌ಬಿಬಿಎಸ್, ಎಮ್‌ಡಿ, ಬಿಡಿಎಸ್, ಎಮ್‌ಡಿಎಸ್, ಬಿ.ಆಯುಷ್, ಎಮ್,ಆಯುಷ್, ಬಿಇ, ಬಿಟೆಕ್, ಬಿ.ಆರ್ಕ್, ಎಮ್.ಆರ್ಕ್, ಎಮ್‌ಬಿಎ, ಎಮ್‌ಸಿಎ, ಎಲ್‌ಎಲ್‌ಬಿ, ಬಿ.ಎಸ್‌ಸಿ ತೋಟಗಾರಿಕೆ, ಕೃಷಿ, ಕೃಷಿ ಎಂಜನೀಯರಿಂಗ್, ಡೈರಿ ತಂತ್ರಜ್ಞಾನ, ಅರಣ್ಯ, ಪಶುವೈದ್ಯಕೀಯ ಮತ್ತು ಪ್ರಾಣಿ ವಿಜ್ಞಾನ, ಆಹಾರ ತಂತ್ರಜ್ಞಾನ, ಮೀನುಗಾರಿಕೆ, ರೇಷ್ಮೆ, ಕೃಷಿ, ಗೃಹ, ಸಮುದಾಯ ವಿಜ್ಞಾನ, ಆಹಾರ ಪೋಷಣೆ ಮತ್ತ ಆಹಾರ ಪದ್ಧತಿ, ಬಿ.ಫಾರ್ಮಾ, ಎಮ್.ಫಾರ್ಮಾ, ಡಿ.ಫಾರ್ಮಾ ಈ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು www.kccdclonline.karnataka.gov.in ಮೂಲಕ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:0836-2748226 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ (ನಿ) ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಳಪೆ ಕಾಮಗಾರಿ ಪ್ರಶ್ನಿಸಿದವರಿಗೆ ಅವಹೇಳನಕಾರಿ ಮಾತು? - ಸಂಸದ ಇ. ತುಕಾರಾಂ ವಿರುದ್ಧ ಬಿಜೆಪಿ ಪ್ರತಿಭಟನೆ



**ಬೆಳಗಾವಿ ವಾರ್ತೆ ಬಳ್ಳಾರಿ:** ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಡಾಣಾಪುರ ಗ್ರಾಮದ ಸಮೀಪ ರಾಷ್ಟ್ರೀಯ ಹೆದ್ದಾರಿ-50ರ ಸರ್ವಿಸ್ ರಸ್ತೆ ಕುಸಿತ ಪ್ರಕರಣ ರಾಜಕೀಯ ತಿರುವು ಪಡೆದುಕೊಂಡಿದ್ದು, ಸಂಸದ ಇ. ತುಕಾರಾಂ ಅವರ ವಿರುದ್ಧ ಬಳ್ಳಾರಿ ಬಿಜೆಪಿ ಘಟಕ ತೀವ್ರ ಪ್ರತಿಭಟನೆ ನಡೆಸಿದೆ.

ಸುಮಾರು 33 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಮೇಲ್ಸೇತುವೆ ಹಾಗೂ ಸರ್ವಿಸ್ ರಸ್ತೆ ಕಾಮಗಾರಿಯಲ್ಲಿ ಗುಣಮಟ್ಟದ ಮಾನದಂಡಗಳನ್ನು ಪಾಲಿಸಿಲ್ಲ ಎಂಬ ಆರೋಪ ಕೇಳಿಬಂದಿದೆ. ರಸ್ತೆ ನಿರ್ಮಾಣಕ್ಕೆ ಮಣ್ಣಿನ ಬದಲಾಗಿ ಫ್ಲೈ ಆಶ್ ಬಳಸಿರುವ ಪರಿಣಾಮ ಕಾಮಗಾರಿ ಪೂರ್ಣಗೊಂಡ ಕೆಲವೇ ದಿನಗಳಲ್ಲಿ ರಸ್ತೆ ಕುಸಿದಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಘಟನೆಯ ವೇಳೆ ಟ್ರಕ್‌ವೊಂದು ರಸ್ತೆಯಲ್ಲಿ ಸಿಲುಕಿಕೊಂಡಿರುವುದು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ.

ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ್ದ ಸಂಸದ ಇ. ತುಕಾರಾಂ ಅವರನ್ನು ಕೆಲ ಸ್ಥಳೀಯರು ಕಾಮಗಾರಿಯ ಗುಣಮಟ್ಟ ಕುರಿತು ಪ್ರಶ್ನಿಸಿದ ವೇಳೆ, ಪ್ರಶ್ನಿಸಿದವರೊಂದಿಗೆ ಅವಹೇಳನಕಾರಿ ಹಾಗೂ ಅಶ್ಲೀಲ ಭಾಷೆ ಬಳಸಿದ್ದಾರೆ ಎಂದು ಬಿಜೆಪಿ ಮುಖಂಡರು ಆರೋಪಿಸಿದ್ದಾರೆ. ಈ ಘಟನೆಯನ್ನು ಖಂಡಿಸಿ ಬಳ್ಳಾರಿಯ ರಾಯಲ್ ಸರ್ಕಲ್‌ನಲ್ಲಿ ಬಿಜೆಪಿ ಕಾರ್ಯ ಕರ್ತರು ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು. ಬಳಿಕ ಸಂಸದರ ಪ್ರತಿಕೃತಿಯನ್ನು ದಹಿಸಿ ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಇ. ತುಕಾರಾಂ ಅವರು ನೈತಿಕ ಹೊಣೆ ಹೊತ್ತು ತಕ್ಷಣ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆ ವೇಳೆ ಮಾತನಾಡಿದ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಅನಿಲ್ ಕುಮಾರ್ ಮೋಕಾ, "ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕಾದ ಜನಪ್ರತಿನಿಧಿ ಸಾರ್ವಜನಿಕರೊಂದಿಗೆ ಅಸಭ್ಯವಾಗಿ ವರ್ತಿಸಿರುವುದು ಖಂಡನೀಯ. ಜಿಲ್ಲೆಯ ಅಭಿವೃದ್ಧಿಯಲ್ಲಿ ವಿಫಲರಾಗಿರುವ ಸಂಸದರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು" ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ನಗರ ಅಧ್ಯಕ್ಷ ಗುರ್ರಂ ವೆಂಕಟರಮಣ, ಕೆ.ಎಸ್. ದಿವಾಕರ್, ಗುಡುಗಂಟಿ ಹನುಮಂತು, ಯುವ ಮೋರ್ಚಾ ಅಧ್ಯಕ್ಷ ಕೇಶವ್ ಸೇರಿದಂತೆ ಪಕ್ಷದ ಹಲವು ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

# ಜೂನ್ 18ರಂದು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆ

**ಬೆಳಗಾವಿ ವಾರ್ತೆ ವಿಜಯನಗರ(ಹೊಸಪೇಟೆ):** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಮೊರಾರ್ಜಿ, ಕಿತ್ತೂರು ರಾಣಿ ಚನ್ನಮ್ಮ, ಅಟಲ್, ಅಂಬೇಡ್ಕರ್, ಇಂದಿರಾ ಗಾಂಧಿ ವಸತಿ ಶಾಲೆ ಹಾಗೂ ಕಾಲೇಜುಗಳಿಗೆ ಖಾಲಿ ಇರುವ ಅತಿಥಿ ಉಪನ್ಯಾಸಕ ಸ್ಥಾನಗಳಿಗೆ ಇದೇ ಜೂನ್ 18 ರಂದು ಬೆಳಿಗ್ಗೆ 10 ಗಂಟೆಗೆ ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು. ಈ ಹುದ್ದೆಗಳಿಗೆ ಪಾಠ ವೀಕ್ಷಣಾ-ಪ್ರಾತ್ಯಕ್ಷತೆ ಮಾನದಂಡ ಆಧಾರದ ಮೇಲೆ ಆಯ್ಕೆಮಾಡಲಾಗುತ್ತಿದ್ದು, ಆಯ್ಕೆ ಸಮಿತಿ ಸಭೆಯನ್ನು ಕರೆಯಲಾಗಿದೆ. ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಕೂಡ್ಲಿಗಿ ತಾಲೂಕಿನ ಹಿರೇಹೆಗ್ಡಾಳ್ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗೆ ಹಾಜರಾಗಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ.ಎ.ಕಾಳೆ ತಿಳಿಸಿದ್ದಾರೆ.

# "ಹರ್ ಘರ್ ಏಕ್ ಪೇಡ್" ಅಭಿಯಾನಕ್ಕೆ ಬಳ್ಳಾರಿಯಲ್ಲಿ ಭರ್ಜರಿ ಬೆಂಬಲ । 250 ಸಸಿಗಳ ವಿತರಣೆ

**ಬೆಳಗಾವಿ ವಾರ್ತೆ ಬಳ್ಳಾರಿ:** ಪ್ರಧಾನಿ ನರೇಂದ್ರ ಮೋದಿ ಅವರ ಪರಿಸರ ಸಂರಕ್ಷಣೆಯ ಮಹತ್ವಾಕಾಂಕ್ಷಿ ಯೋಜನೆಯಾದ "ಹರ್ ಘರ್ ಏಕ್ ಪೇಡ್" (ಪ್ರತಿ ಮನೆಗೆ ಒಂದು ಗಿಡ) ಅಭಿಯಾನಕ್ಕೆ ಬೆಂಬಲ ಸೂಚಿಸುವ ಉದ್ದೇಶದಿಂದ ಬಳ್ಳಾರಿ ನಗರದ ವಾರ್ಡ್ ನಂ. 9ರಲ್ಲಿ 250 ಸಸಿಗಳ ವಿತರಣೆ ಕಾರ್ಯಕ್ರಮ ನಡೆಯಿತು.

ಮಂಗಳಮುಖಿ ಚಾಂದಿನಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮಕ್ಕೆ ರೂಪನಗುಡಿ ರಸ್ತೆಯ ಹುಲಿಗಮ್ಮ ದೇವಸ್ಥಾನ ಆವರಣದಲ್ಲಿ ಸಸಿ ನೆಡುವ ಮೂಲಕ ಚಾಲನೆ ನೀಡಲಾಯಿತು. ಬಳಿಕ ಮಾತನಾಡಿದ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಹಂಪಿ ರಾಮನ, ಪರಿಸರ ಸಂರಕ್ಷಣೆ ಮತ್ತು ಹಸಿರು ವಾತಾವರಣ ನಿರ್ಮಾಣದ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪವನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಆಯೋಜಕಿ ಚಾಂದಿನಿ ಮಾತನಾಡಿ, ಹೆಚ್ಚುತ್ತಿರುವ ಬೇಸಿಗೆಯ ತಾಪಮಾನವನ್ನು ನಿಯಂತ್ರಿಸಲು ಪ್ರತಿಯೊಬ್ಬರೂ ತಮ್ಮ ಮನೆ ಹಾಗೂ ಸುತ್ತಮುತ್ತ ಕನಿಷ್ಠ ಒಂದು ಸಸಿಯನ್ನಾದರೂ ನೆಟ್ಟು ಪೋಷಿಸಬೇಕು ಎಂದು ಕರೆ ನೀಡಿದರು. ಒಂದು ಕುಟುಂಬದಲ್ಲಿ ಇರುವ ಸದಸ್ಯರ ಸಂಖ್ಯೆಗೆ ಅನುಗುಣವಾಗಿ ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಗೆ ಕೈಜೋಡಿಸುವಂತೆ ಅವರು ಮನವಿ ಮಾಡಿದರು.



ಬಳ್ಳಾರಿ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ಮುಖ್ಯ ಅತಿಥಿಯಾಗಿ ಭಾಗವಹಿಸಿ ಸಸಿ ನೆಡುವ ಮೂಲಕ ಅಭಿಯಾನಕ್ಕೆ ಬೆಂಬಲ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರು, ಮಹಿಳಾ ಮೋರ್ಚಾ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ತಂಬಾಕು ಸೇವನೆ ಕ್ಯಾನ್ಸರ್‌ಗೆ ದಾರಿ: ಸತೀಶ್ ಜಿ

**ಬೆಳಗಾವಿ ವಾರ್ತೆ ಬಳ್ಳಾರಿ:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ) ಬಳ್ಳಾರಿ-2 ಯೋಜನಾ ಕಚೇರಿ ವ್ಯಾಪ್ತಿಯ ಸಿದ್ದಮ್ಮ ನಹಳ್ಳಿ ವಲಯದ ಕುಡುತೀನಿ ಕಾರ್ಯ ಕ್ಷೇತ್ರದಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಮಹಾಂತೇಶ್ ಹಿರೇಮಠ್ ಅವರು ತಂಬಾಕು ಸೇವನೆಯ ದುಷ್ಪರಿಣಾಮಗಳು, ಅದರಿಂದ ಉಂಟಾಗುವ ಮಾರಕ ಕ್ಯಾನ್ಸರ್ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳ ಕುರಿತು ವಿವರವಾಗಿ ಮಾಹಿತಿ ನೀಡಿದರು. ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಬಳಕೆಯನ್ನು ತಡೆಯಲು ಸಾರ್ವಜನಿಕರು ಜಾಗೃತರಾಗಬೇಕು. ಗ್ರಾಮ ಹಾಗೂ ನಗರಗಳನ್ನು ತಂಬಾಕು ಮುಕ್ತವಾಗಿಸಲು ಸಂಬಂಧಿತ ಇಲಾಖೆಗಳೊಂದಿಗೆ ಕೈಜೋಡಿಸುವ ಅಗತ್ಯವಿದೆ ಎಂದು ತಿಳಿಸಿದರು.



ಇದೇ ವೇಳೆ ಶಾಲಾ-ಕಾಲೇಜು ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿರುವ ನಿಕೋಟಿನ್ ಬಳಕೆ ಆತಂಕಕಾರಿ ಬೆಳವಣಿಗೆಯಾಗಿದ್ದು, ಇದರ ಪರಿಣಾಮವಾಗಿ ಕ್ಯಾನ್ಸರ್ ಸೇರಿದಂತೆ ಗಂಭೀರ ಕಾಯಿಲೆಗಳು ಉಂಟಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು. ಆರೋಗ್ಯ ಇಲಾಖೆಯ ಜಾಗೃತಿ ಕಾರ್ಯಕ್ರಮಗಳ ಸದುಪಯೋಗ ಪಡೆದು ತಂಬಾಕು ಸೇವನೆಯಿಂದ ದೂರವಿರಬೇಕು ಎಂದು ಸಲಹೆ ನೀಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಸತೀಶ್ ಜಿ ಮಾತನಾಡಿ, "ಗಂಟಲು ಹಾಗೂ ಶ್ವಾಸಕೋಶ ಕ್ಯಾನ್ಸರ್ ಮುಕ್ತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ತಂಬಾಕು ಸೇವನೆಯಿಂದ ದೂರವಿದ್ದು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು" ಎಂದು ಕರೆ ನೀಡಿದರು. ಅಲ್ಲದೆ ಸದಸ್ಯರಿಗೆ ತಂಬಾಕು ವಿರೋಧಿ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ಪದಾಧಿಕಾರಿಗಳು, ವಲಯ ಮೇಲ್ವಿಚಾರಕ ಶರಣಪ್ಪ, ಸೇವಾ ಪ್ರತಿನಿಧಿಗಳಾದ ಅರುಣಾ, ಶ್ರುತಿ ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

# 12 ನೇ ಅಂತಾರಾಷ್ಟ್ರಿಯ ಯೋಗ ದಿನಾಚರಣೆಯ ನಿಮಿತ್ಯ ಪೂರ್ವಭಾವಿ ಸಭೆ

## ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿ : ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

**ಬೆಳಗಾವಿ ವಾರ್ತೆ ಗದಗ:** 12 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21 ರಂದು ನಗರದ ಕೆ. ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಆಯುಷ ಇಲಾಖೆಯ ವತಿಯಿಂದ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ತಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯ ರಕ್ಷಣೆಗಾಗಿ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು. ಇಂದಿನ ಒತ್ತಡಮಯ ಜೀವನಶೈಲಿಯಿಂದಾಗಿ ಪ್ರತಿಯೊಬ್ಬರಿಗೂ ಮಾನಸಿಕ ಹಾಗೂ ದೈಹಿಕ ಸಮಸ್ಯೆಗಳು ಉಂಟಾಗುವುದು ಸರ್ವೇ ಸಾಮಾನ್ಯವಾಗಿದೆ. ಆದಕಾರಣ ನೌಕರರು ಹಾಗೂ ಸಾರ್ವಜನಿಕರು ಮಾನಸಿಕ ಹಾಗೂ ದೈಹಿಕ ಸದೃಢತೆಗೆ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು. ಜಿಲ್ಲೆಯ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲೆ ಹಾಗೂ ಕಾಲೇಜುಗಳಲ್ಲಿ ಯೋಗ



ದಿನಾಚರಣೆಯನ್ನು ಕಡ್ಡಾಯವಾಗಿ ಹಮ್ಮಿಕೊಳ್ಳಬೇಕು. ಕೇವಲ ಒಂದು ದಿನದ ಆಚರಣೆಯಾಗದೆ, ವಿದ್ಯಾರ್ಥಿಗಳಲ್ಲಿ ಏಕಾಗ್ರತೆ ಹಾಗೂ ನೆನಪಿನ ಶಕ್ತಿಯನ್ನು ಉತ್ತಮಪಡಿಸಲು ಯೋಗವನ್ನು ನಿರಂತರವಾಗಿ ಅಭ್ಯಾಸ ಮಾಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರಲ್ಲಿ ಆರೋಗ್ಯದ ಬಗ್ಗೆ ನಿರಂತರ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಯೋಗ ಸಂಸ್ಥೆಗಳು ಪ್ರಮುಖ ಪಾತ್ರ ವಹಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ವಯಸ್ಸಿನ ನಿರ್ಬಂಧವಿಲ್ಲದೆ, ಸಾರ್ವಜನಿಕರು, ಹಿರಿಯ ನಾಗರಿಕರು ಮತ್ತು ಯೋಗಾಸಕ್ತರು ಮುಕ್ತವಾಗಿ ಭಾಗವಹಿಸಲು ಸಾರ್ವಜನಿಕರ ಮುಕ್ತ ಭಾಗಿತ್ವ ಅವಕಾಶ ಕಲ್ಪಿಸಲಾಗಿದೆ. ಕಾರ್ಯಕ್ರಮದ ಸ್ಥಳದಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಸೇರಿದಂತೆ ಎಲ್ಲಾ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಜಿಲ್ಲಾ ಆಯುಷ ಇಲಾಖೆಯ ಅಧಿಕಾರಿ ಡಾ. ಜುಬೇದಬೇಗಂ ಅವರು ಮಾತನಾಡಿ ಜೂನ್ 21 ರಂದು ಬೆಳಿಗ್ಗೆ 6.15 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 12 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಉದ್ಘಾಟನಾ ಸಮಾರಂಭ ಜರುಗಲಿದೆ. ತದನಂತರ ಬೆಳಿಗ್ಗೆ 7 ಗಂಟೆಯಿಂದ ಯೋಗಾಭ್ಯಾಸ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮ ಹಿಂದಿನ ದಿನ ಜೂನ್ 20 ರಂದು 12 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಾಥಾವು ಅಂದು ಬೆಳಿಗ್ಗೆ 9.30 ಗಂಟೆಗೆ ಗದಗ ಬೆಟಗೇರಿ ನಗರ ಆವರಣದಿಂದ ಹೊರಟು ಟಾಂಗಾ ಕೂಟ, ರೋಟರಿ ಸರ್ಕಲ್, ಗಾಂಧಿ ಸರ್ಕಲ್ ಮಾರ್ಗವಾಗಿ ನಗರಸಭೆ ಆವರಣಕ್ಕೆ ಬಂದು ತಲುಪಲಿದೆ ಎಂದು ಸಭೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ವಿವರಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ರಾಧಾ ಮಣ್ಣೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ.ಮಸನಾಯಕ, ಆಯುಷ ವೈದ್ಯಾಧಿಕಾರಿಗಳ ಸಂಘದ ಅಧ್ಯಕ್ಷ ಡಾ. ಸಂಜೀವ ನಾರಪ್ಪನವರ, ಕೆ.ಎಚ್ ಪಾಟೀಲ್ ಆಸ್ಪತ್ರೆ ವೈದ್ಯಾಧಿಕಾರಿ ಡಾ. ಸತೀಶ್ ಹೊಂಬಾಳಿ, ಬ್ರಹ್ಮಕುಮಾರಿ ಅಕ್ಕನವರು, ಆಯುಷ ವೈದ್ಯಾಧಿಕಾರಿಗಳ ಸಂಘದ ಕಾರ್ಯದರ್ಶಿ ಡಾ. ಬಿ.ಎಂ ಲೋಕಪುರಿ, ಡಾ. ಎಂ.ಎಂ ಹಾದಿಮನಿ, ಡಾ. ಸಾಯಿಪ್ರಕಾಶ, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಯೋಗ ಸಂಸ್ಥೆಯ ಪದಾಧಿಕಾರಿಗಳು ಹಾಜರಿದ್ದರು.

# ಶಿಕ್ಷಕರ ಕೊರತೆ: ಸರ್ಕಾರ ಶಾಲೆಗಳ ಅಧೋಗತಿ

**ಬೆಳಗಾವಿ ವಾರ್ತೆ ಶಿರಹಟ್ಟಿ:** ಸರ್ಕಾರದ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಾಥಮಿಕ ಶಿಕ್ಷಣದ ಉನ್ನತಿಗಾಗಿ ಗುಣಮಟ್ಟದ ಶಿಕ್ಷಣಕ್ಕಾಗಿ ಖಾಸಗಿ ಶಾಲೆಗಳ ಪೈಪೋಟಿ ತಡೆಯಲು ಸರ್ಕಾರಿ ಪ್ರಾಥಮಿಕ ಕನ್ನಡ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ಮತ್ತು ಎಲ್ ಕೆ ಜಿ ಯುಕೆಜಿ ಆರಂಭಿಸಿದ್ದರು ಸಹ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕುಸಿಯುತ್ತಿದ್ದು ಕನ್ನಡ ಶಾಲೆಗಳ ಅಧೋಗತಿಗೆ ಹಿಡಿದ ಕನ್ನಡಿಯಾಗಿದೆ. ತಾಲೂಕಿನ ಛಬ್ಬಿ ತಾಂಡಾದಲ್ಲಿರುವ ಪ್ರಾಥ ಮಿಕ ಕನ್ನಡ ಶಾಲೆಯಲ್ಲಿ ಅನೇಕ ವರ್ಷ ಗಳಿಂದ ಖಾಯಂ ಶಿಕ್ಷಕರಿಲ್ಲದೆ ಕೇವಲ ನಿಯೋಜಿತ ಶಿಕ್ಷಕರ ಮೇಲೆ ನಡೆ ಯುತ್ತಿದ್ದು ಒಂದನೇ ವರ್ಗದಿಂದ ಐದನೆ ಯ ವರ್ಗದವರಿಗೆ ಕೇವಲ 26 ವಿದ್ಯಾರ್ಥಿಗಳು ಇರುವುದು ಅತ್ಯಂತ ಕಳವಳಕಾರಿ ಸಂಗತಿಯಾಗಿದೆ. ಈ ಶಾಲೆಯಲ್ಲಿ ಒಂದ ನೇ ವರ್ಗಕ್ಕೆ ಇಬ್ಬರು ವಿದ್ಯಾರ್ಥಿಗಳು ಎರಡನೇ ವರ್ಗಕ್ಕೆ ನಾಲ್ಕು ವಿದ್ಯಾರ್ಥಿಗಳು ಮೂರನೇ ವರ್ಗ ಮೂರು ವಿದ್ಯಾರ್ಥಿಗಳು ನಾಲ್ಕನೇ ವರ್ಗಕ್ಕೆ ನಾಲ್ಕು ವಿದ್ಯಾರ್ಥಿಗಳು ಐದನೇ ವರ್ಗಕ್ಕೆ 13 ವಿದ್ಯಾರ್ಥಿಗಳಿದ್ದು ಇರುವ ಏಕೈಕ ಶಿಕ್ಷಕರು ಜೊತೆಗೆ ಬಿಸಿಯೂಟ ಇಲಾಖೆ ಕೆಲಸ ಪಾಠ ಪ್ರವಚನ ಮಾಡುವ ಧಾವಂತದಲ್ಲಿ ಶಿಕ್ಷಕರಿದ್ದಾರೆ. ಈ ಶಾಲೆಯ ಪರಿಸ್ಥಿತಿ ಕಂಡ ಪೋ ಷಕರು ತಮ್ಮ ತಮ್ಮ ಮಕ್ಕಳನ್ನು ಬೇರೆ ಕಡೆಗೆ ದಾಖಲೆ ಮಾಡುತ್ತಿದ್ದಾರೆ. ಸರ್ಕಾರ ಶಾಲಾ ಆರಂಭದಲ್ಲಿ ಪ್ರವೇಶಾತಿ ಆಂದೋ ಲನ ಕನ್ನಡ ಶಾಲೆಗೆ ಮಕ್ಕಳನ್ನು ಕಳಿಸಿ ಎಂದೆಲ್ಲ ಸರ್ಕಸ್ ಮಾಡಿದರು ಶಿಕ್ಷಕರ ಕೊರತೆ ಕನ್ನಡ



ಶಾಲೆಗಳ ಅಧೋ ಗತಿಗೆ ಕಾರಣವಾಗಿದೆ. ಮೊದಲು ಸರ್ಕಾರ ಕನ್ನಡ ಶಾಲೆಗಳಿಗೆ ಮೊದಲ ಆದ್ಯತೆಯಲ್ಲಿ ಶಿಕ್ಷಕರನ್ನು ನೀಡುವ ನೈತಿಕ ಹೊಣೆಗಾರಿ ಕೆಯನ್ನು ಹೊಂದಬೇಕು ಕೇವಲ ಬಟ್ಟೆ ಬರೆ ಪುಸ್ತಕ ಶೋ ಪಾದ ರಕ್ಷೆ ಸೈಕಲ್ಲು ನೀಡುವ ಬದಲು ಪ್ರತಿ ಕನ್ನಡ ಶಾಲೆಗಳ ಉದ್ಧಾರಕ್ಕಾಗಿ ಶಿಕ್ಷಕರನ್ನು ನೇಮಿಸಬೇಕು. ಛಬ್ಬಿ ತಾಂಡಾದ ಶಾಲೆಯ ಈ ದುಸ್ಥಿತಿ ಮತ್ತು ಏಕೋಪಾಧ್ಯಾಯ ಶಾಲೆಯ ಪರಿಸ್ಥಿತಿಯನ್ನು ಹೇಗೆ ನಿಭಾಯಿಸಲು ಸಾಧ್ಯ ಎಂಬುದನ್ನು ಶಿಕ್ಷಣ ಇಲಾಖೆಯವರೇ ಉತ್ತರಿಸಬೇಕು.

# ಯೋಜನೆಗಳ ಸೌಲಭ್ಯ ಫಲಾನುಭವಿಗಳಿಗೆ ಸಕಾಲದಲ್ಲಿ ಒದಗುವಂತಾಗಬೇಕು: ಅಶೋಕ ಮಂದಾಲಿ

**ಬೆಳಗಾವಿ ವಾರ್ತೆ ಗದಗ:** ಸರ್ಕಾರದಿಂದ ಜಾರಿಯಾಗಿರುವ ಪಂಚಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು ಈ ಯೋಜನೆಗಳ ಅನುಷ್ಠಾನವು ಬಡಜನರ ಸೇವೆಗೆ ಒದಗಿಸಿದ ಬಹುದೊಡ್ಡ ಅವಕಾಶವಾಗಿದೆ ಎಂದು ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೊಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಡವರಿಗೆ ಗ್ಯಾರಂಟಿ ಯೋಜನೆಯ ಸೌಲಭ್ಯ ತಲುಪಿಸುವಲ್ಲಿ ವಿಳಂಬವಾಗಬಾರದು. ಸೌಲಭ್ಯಗಳನ್ನು ನಿಗದಿತ ಅವಧಿಯಲ್ಲಿಯೇ ತಲುಪಿಸುವಂತಾಗಬೇಕು. ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನ ಶೇಕಡ ನೂರರಷ್ಟು ಪ್ರಗತಿ ಸಾಧಿಸಬೇಕು. ಗ್ಯಾರಂಟಿ ಯೋಜನೆಯ ಅನುಷ್ಠಾನದಲ್ಲಿ ಪ್ರಾಮಾಣಿಕತನವಿರಬೇಕು. ಬಡಜನರಿಗೆ ಸೇವೆ ಸಲ್ಲಿಸುವುದು ಪವಿತ್ರ ಕೆಲಸವಾಗಬೇಕು ಎಂದರು.

ರಸ್ತೆ ಅಕ್ಕಪಕ್ಕದಲ್ಲಿನ ವಿದ್ಯುತ್ ಕಂಬಗಳು ದುರಸ್ತಿಯಾದಾಗ ಅಥವಾ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದಾಗ ಸಾರ್ವಜನಿಕರು ಹೆಸ್ಕಾಂ ಕಚೇರಿಯವರನ್ನು ಸಂಪರ್ಕಿಸಿದಾಗ ಹೆಸ್ಕಾಂನ ಲೈನ್‌ಮನ್‌ಗಳು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಗದಗ ತಾಲೂಕಿನ ಬಸ್ ನಿಲ್ದಾಣಗಳ ಆವರಣಗಳು ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಶುದ್ಧ ಕುಡಿಯುವ ನೀರು, ಮಹಿಳೆಯರು, ಹಿರಿಯ ನಾಗರಿಕರು ಕುಳಿತುಕೊಳ್ಳಲು ಸೂಕ್ತ ಆಸನದ ವ್ಯವಸ್ಥೆ ಹಾಗೂ ಶೌಚಾಲಯದ ವ್ಯವಸ್ಥೆ ಇರುವಂತೆ ಗಮನ ಹರಿಸಬೇಕು ಎಂದರು.

ಮಹಿಳೆಯರಿಗೆ ಸ್ವಾವಲಂಬಿ ಜೀವನ ನಡೆಸಲು ಹಾಗೂ ಆರ್ಥಿಕ ಸಬಲೀಕರಣಗೊಳಿಸಲು ಗೃಹಲಕ್ಷ್ಮಿ ??ೀ ಯೋಜನೆಯನ್ನು ಜಾರಿಗೊಳಿಸಿದ್ದು ಈ



ಸೌಲಭ್ಯದಿಂದ ಯಾವ ಅರ್ಹ ಫಲಾನುಭವಿಯೂ ವಂಚಿತರಾಗದಂತೆ ನೋಡಿಕೊಳ್ಳಬೇಕು ಗೃಹಲಕ್ಷ್ಮಿ ??ೀ ಯೋಜನೆಯ ಹಣ ದುರುಪಯೋಗವಾಗದಂತೆ ಕ್ರಮ ವಹಿಸಬೇಕು. ಮರಣ ಹೊಂದಿದವರ ಖಾತೆಗ ಗೃಹಲಕ್ಷ್ಮಿ ??ೀ ಹಣ ಜಮಾ ಆಗುತ್ತಿದ್ದರೆ ಅಂತಹ ಪ್ರಕರಣಗಳಾಗದಂತೆ ತಡೆಯಲು ಕ್ರಮ ವಹಿಸಬೇಕು. ಒಂದು ವೇಳೆ ಮರಣ ಹೊಂದಿದವರ ಖಾತೆಗೆ ಗೃಹಲಕ್ಷ್ಮಿ ??ೀ ಹಣ ಜಮೆಯಾಗಿದ್ದರೆ ಅಂತಹ ಹಣವನ್ನು ಸರ್ಕಾರಕ್ಕೆ ಮರುಪಾವತಿಗೆ ಕ್ರಮ ವಹಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು ಆಯಾ ವ್ಯಾಪ್ತಿಯಲ್ಲಿನ ಮನೆ ಮನೆಗೆ ತೆರಳಿ ಸಮೀಕ್ಷೆ ನಡೆಸಿ ಗೃಹಲಕ್ಷ್ಮಿ ??ೀ ಯೋಜನೆಯ ಫಲಾನುಭವಿಗಳ ವಿವರ ಹಾಗೂ ಮರಣ ಹೊಂದಿದವರ ಸಂಪೂರ್ಣ ವಿವರಗಳನ್ನು ಸಂಗ್ರಹಿಸಲು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನಿರ್ದೇಶನ ನೀಡಬೇಕು. ಈ ವರದಿಯನ್ನು ಎಲ್ಲ ಬ್ಯಾಂಕುಗಳಿಗೆ ಸಲ್ಲಿಸಬೇಕು. ಒಟ್ಟಾರೆಯಾಗಿ ಗೃಹಲಕ್ಷೀ ಯೋಜನೆಯ ಸೌಲಭ್ಯ ಪೂರ್ಣಪ್ರಮಾಣ ದಲ್ಲಿ ಸದ್ಬಳಕೆಯಾಗಬೇಕು ಎಂದು ಅಶೋಕ ಮಂದಾಲಿ ನಿರ್ದೇಶನ ನೀಡಿದರು.

ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಕೃಷ್ಣಗೌಡ ಎಚ್. ಪಾಟೀಲ ಅವರು ಮಾತನಾಡಿ ಅರ್ಹ ನಿರುದ್ಯೋಗಿ ಯುವಕ-ಯುವತಿಯರಿಗೆ ಯುವನಿಧಿ ಯೋಜನೆಯ ಮಾಹಿತಿ ತಲುಪಿಸಲು ಪ್ರತಿ ಪಂಚಾಯತಿ ವ್ಯಾಪ್ತಿಯಲ್ಲಿ ಹಾಗೂ ತಾಲೂಕಿನ ಎಲ್ಲಾ ಪದವಿ ಮತ್ತು ಡಿಪ್ಲೊಮಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಮಾಹಿತಿ ಬ್ಯಾನರ್‌ಗಳನ್ನು ಅಳವಡಿಸುವ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಯುವನಿಧಿ ಯೋಜನೆಯ ಸೌಲಭ್ಯದಿಂದ ಯಾವೊಬ್ಬ ಅರ್ಹ ಫಲಾನುಭವಿ ವಂಚಿತರಾಗಬಾರದು. ಅನ್ನಭಾಗ್ಯ ಯೋಜನೆಯ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಕಳೆದ ಸಾಲಿನ ಸಭೆಯಲ್ಲಿನ ಯೋಜನೆಗಳ ಪ್ರಗತಿಯ ವಿವರಗಳು ಹಾಗೂ ಈಗಿನ ಸಭೆಯಲ್ಲಿನ ಪ್ರಗತಿ ವಿವರಗಳ ಪರಾಮರ್ಶೆ ನಡೆಸಿ ಇನ್ನೂ ಹೆಚ್ಚಿನ ಪ್ರಗತಿ ಸಾಧಿಸಲು ಅಧಿಕಾರಿಗಳು ಶ್ರಮ ವಹಿಸಿ ಕೆಲಸ ನಿರ್ವಹಿಸಬೇಕು ಎಂದರು.

ಪಂಚಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ಒದಗಿಸಿದರು.

ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ ಜನವರಿ ದಿ: 31-1-2026 ರವರೆಗೆ 2748 ಅಭ್ಯರ್ಥಿಗಳು ನೊಂದಣಿಯಾಗಿದ್ದು 1188 ಅರ್ಹ ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಹಣ ವರ್ಗಾವಣೆಯಾಗಿರುತ್ತದೆ. ಬಾಕಿ ಉಳಿದ 1560 ಅಭ್ಯರ್ಥಿಗಳು ಯುವ ನಿಧಿ ಯೋಜನೆಯ ಷರತ್ತುಗಳಿಗೆ ಹಂತ ಹಂತವಾಗಿ ಅರ್ಹರಾಗುತ್ತಾರೆ.

ಗೃಹಲಕ್ಷೀ ಯೋಜನೆಯಡಿ ಗದಗ ತಾಲೂಕಿನಲ್ಲಿ 83593 ಸ್ವೀಕೃತಗೊಂಡ/ ನೊಂದಣಿಯಾದ ಅರ್ಜಿಗಳು ಇದ್ದು 80265 ಅರ್ಜಿಗಳಿಗೆ ಡಿಬಿಟಿ ಮೂಲಕ ಹಣ ಪಾವತಿಯಾಗಿದೆ. ಶೇ 96.01 ರಷ್ಟು ಪ್ರಗತಿಯಾಗಿದೆ.

ಶಕ್ತಿ ಯೋಜನೆಯಡಿ ಗದಗ ಘಟಕ ದಲ್ಲಿ ದಿ:11-6-2023 ರಿಂದ 9-6-2026 ರವರೆಗೆ ಮಹಿಳಾ ಪ್ರಯಾಣಿಕರಿಂದ 10086.79 ಲಕ್ಷ ರೂ. ಆದಾಯವಾಗಿರುತ್ತದೆ. ದಿ: 1-6-2023 ರಿಂದ 9-6-2026 ರವರೆಗೆ ಬೆಟಗೇರಿ ಘಟಕದಲ್ಲಿ ಮಹಿಳಾ ಪ್ರಯಾಣಿಕರಿಂದ 5974.09 ಲಕ್ಷ ರೂ. ಆದಾಯವಾಗಿದೆ.

ಅನ್ನಭಾಗ್ಯ ಯೋಜನೆಯಡಿ ಗದಗ ಶಹರದ ಭಾಗದಲ್ಲಿ ಎನ್ ಎಸ್ ಎಫ್ ಎ ಅಕ್ಕಿ ಹಂಚಿಕೆ ( ಕೇಂದ್ರ ಸರ್ಕಾರ) ಮೇ ಮತ್ತು ಜೂನ್ 2026 ಮಾಹೆಯ ಹಂಚಿಕೆಯಡಿ ( ಎಎವೈ + ಬಿಪಿಎಲ್ ) 32694 ಪಡಿತರ ಕಾರ್ಡುದಾರರಿಗೆ 11236.30 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ. ಗದಗ ಗ್ರಾಮೀಣ ಭಾಗದಲ್ಲಿ ಮೇ ಮತ್ತು ಜೂನ್ -2026 ರ ಮಾಹೆಯಲ್ಲಿ ಎನ್‌ಎಸ್‌ಎಫ್‌ಎ ಅಕ್ಕಿ ಹಂಚಿಕೆಯಡಿ (ಎಎವೈ+ ಬಿಪಿಎಲ್) 48534 ಪಡಿತರ ಕಾರ್ಡುದಾರರಿಗೆ 17890.70 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಗೃಹ ಜ್ಯೋತಿ ಯೋಜನೆಯಡಿ 31-5-2026 ರವರೆಗೆ ಗದಗ ಶಹರದಲ್ಲಿ 46484 ಸ್ಥಾವರಗಳು ಅರ್ಹವಿದ್ದು ಆ ಪೈಕಿ 46240 ಸ್ಥಾವರಗಳು ನೊಂದಣಿಯಾಗಿವೆ. ಶೇ 99.48 ಪ್ರಗತಿ ಸಾಧಿಸಲಾಗಿದೆ. ಗದಗ ಗ್ರಾಮೀಣ ಉಪವಿಭಾಗದಲ್ಲಿ ಗೃಹ ಜ್ಯೋತಿ ಯೋಜನೆಗೆ 53324 ಸ್ಥಾವರಗಳು ಅರ್ಹವಿದ್ದು ಆ ಪೈಕಿ 53103 ಸ್ಥಾವರಗಳು ನೊಂದಣಿಯಾಗಿವೆ. ಶೇ 99.59 ರಷ್ಟು ಪ್ರಗತಿ ಸಾಧಿಸಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಶ್ರೀಮತಿ ನೀಲಮ್ಮ ಬೋಳನವರ, ತಾಲೂಕು ಗ್ಯಾರಂಟಿ ಯೋಜನೆಗಳ ಸಮಿತಿ ಸದಸ್ಯರುಗಳಾದ ಶಂಭು ಕಾಳೆ, ಶ್ರೀಮತಿ ಮೀನಾಕ್ಷಿ ಬೆನಕಣ್ಣವರ, ದಯಾನಂದ ಪವಾರ, ಸಂಗು ಕರಕಲಮಟ್ಟಿ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ, ದೇವರಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶ ಸಿಂಗ್ ಮಿಟಾಡೆ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಶ್ರೀಮತಿ ಸಾವಿತ್ರಿ ಹೂಗಾರ, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಡಾ.ಎಚ್.ಎಸ್.ಜಿನಗ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಂ.ವಿ, ಗ್ಯಾರಂಟಿ ಯೋಜನೆಗೆ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

# ಉದ್ಘಾಟನಾ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಶಿಗ್ಲಿ ಗ್ರಾಮದ ಶಾಕಾಂಬರಿ ಸಮುದಾಯ ಭವನದಲ್ಲಿ ವೀರಾಣಿ ಕಿತ್ತೂರು ಚೆನ್ನಮ್ಮ ವಿವಿಧೋದ್ದೇಶಗಳ ಸಂಘದ ಆಶ್ರಯದಲ್ಲಿ ಪ್ರತಿಭಾ ಪುರಸ್ಕಾರ ಪಂಚಮಸಾಲಿ ಸಮಾಜದ ನೌಕರರ ಸಂಘ ಇದರ ಉದ್ಘಾಟನಾ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ಹೂವಿನ ಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ವೀರರಾಣಿ ಕಿತ್ತೂರು ಚೆನ್ನಮ್ಮ ವಿವಿಧೋದ್ದೇಶಗಳ ಸಂಘ ಪ್ರತಿಭಾ ಪುರಸ್ಕಾರ ನಿವೃತ್ತರಿಗೆ ಸನ್ಮಾನ ಮತ್ತು ತಾಲೂಕ ಪಂಚಮಸಾಲಿ ನೌಕರರ ಸಂಘದ ಸಂಘಟನೆ ಈ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಸಮಾಜಮುಖಿ ಕಾರ್ಯಕ್ರಮಗಳಿಗೆ ಒತ್ತು ನೀಡುತ್ತಿರುವುದು ಶ್ಲಾಘನೀಯ.

ಸಂಘ ಸಂಸ್ಥೆಗಳು ಕೇವಲ ತಮ್ಮದೇ ಆದ ಕಾರ್ಯ ಚಟುವಟಿಕೆಗಳ ಜೊತೆಗೆ ಎಲ್ಲಾ ಸಮಾಜದ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಶೈಕ್ಷಣಿಕ ಮುನ್ನಡೆಗೆ ಪ್ರೋತ್ಸಾಹ ನೀಡುತ್ತಿರುವುದು ಮತ್ತು ಸೇವೆಯಿಂದ ನಿವೃತ್ತರಾದವರಿಗೆ ಸನ್ಮಾನಿಸುವುದು ಒಂದು ಒಳ್ಳೆಯ ಕಾರ್ಯ.

ಇಂದು ಸನ್ಮಾನ ಗೋಂಡ ವಿದ್ಯಾರ್ಥಿಗಳು ಭವಿಷ್ಯತ್ತಿನಲ್ಲಿ ಉತ್ತಮ ನಾಗರಿಕರಾಗಿ ಉತ್ತಮ ಶಿಕ್ಷಣ ಪಡೆದು ಯಾವ ಸಮಾಜ ತಮ್ಮನ್ನು ಗೌರವಿಸಿದೆಯೋ ಆ ಸಮಾಜಕ್ಕೆ ಋಣ ತೀರಿಸಬೇಕು ಹೆತ್ತ ತಂದೆ ತಾಯಿಗಳ ವಿದ್ಯೆ ಕೊಟ್ಟ ಶಿಕ್ಷಕರ ಬಗ್ಗೆ ಸದಾ ಗೌರವವನ್ನು ಹೊಂದಬೇಕು ಎಂದು ಹೇಳಿದರು.

ಉದ್ಘಾಟನೆ ನೆರವೇರಿಸಿದ ಗದಗ ಜಿಲ್ಲಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಈರಣ್ಣ ಕರಿಬಿಷ್ಟಿಯವರು ಚೆನ್ನಮ್ಮ ರಾಣಿ ವಿವಿದೋದ್ದೇಶಗಳ ಸಂಘ ಇಂತಹ ರಚನಾತ್ಮಕ ಕಾರ್ಯ ಮಾಡೋ ಮೂಲಕ ಮತ್ತಷ್ಟು ತನ್ನ ಜವಾಬ್ದಾರಿಯನ್ನು ಹೆಚ್ಚಿಸಿಕೊಂಡಿದೆ ಸಮಾಜದಲ್ಲಿ ಸೇವೆ ಸಲ್ಲಿಸಿದವರಿಗೆ ಪ್ರತಿಭೆಗಳಿಗೆ ಗೌರವಿಸುವುದು ನಮ್ಮ ಆದ್ಯ ಕರ್ತವ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಪೊಲೀಸ ಅಧಿಕಾರಿ ಶಂಕರ್ ರಾಗಿಯವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಲೂಕ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಮಾಗಡಿ ಎಸ್ ಪಿ ಬಳಿಗಾರ ಸೋಮಣ್ಣ ಡಾಣಗಲ್ಲ ಬಸವರಾಜ್ ತುಳಿ ನಿಂಗಪ್ಪ ಹುನಗುಂದ ಶಿವಪ್ಪ ಕೆಸರಳ್ಳಿ ನೀಲಪ್ಪ ಹತ್ತಿ ಕಾಳ ಚನ್ನಬಸಪ್ಪ ಬಾಳಿಕಾಯಿ ಚನ್ನಬಸಪ್ಪ ರಾಗಿ ಫಕೀರೇಶ ಹುನುಗುಂದ ಎಸ್ ಕೆ ಹೆಬ್ಬಳ್ಳಿ ಆರ್ ಎನ್ ತೇಲ್ಕರ್ ಹನುಮಂತಪ್ಪ ತಳವಾರ ರಾಮಣ್ಣ ಲಮಾಣಿ ಬಾಲಚಂದ್ರ ಜನಿವಾರದ ನಿಜಗುಣಯ್ಯ ಮುಳುಗುಂದ ಮಠ ಮಹದೇವಪ್ಪ ಬೆಳವಗಿ ಬಸವರಾಜ ಕರ್ಜಗಿ ಸಿ ಆರ್ ಗೋಕಾವಿ ರಾಣಿ ಚೆನ್ನಮ್ಮ ವಿವಿಧೇಶ ಸಹಕಾರಿ ಸಂಘದ ಅಧ್ಯಕ್ಷರು ನಿರ್ದೇಶಕರು ಇದ್ದರು.

# ಪ್ರತಿಭಾ ಪುರಸ್ಕಾರ



**ಬೆಳಗಾವಿ ವಾರ್ತೆ ನವಲಗುಂದ:** ಶೈಕ್ಷಣಿಕ ಸಾಧನೆಯೊಂದಿಗೆ ವಿದ್ಯಾರ್ಥಿಗಳು ಶಿಸ್ತು ಸಂಯಮ ಹಾಗೂ ಕೌಶಲ್ಯ ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳುವಂತೆ ಶ್ರೀ ಜಗದ್ಗುರು ಜಾತ ನಾಗಲಿಂಗಸ್ವಾಮಿ ಮಠದ ಶ್ರೀ ವೀರೇಂದ್ರ ಸ್ವಾಮೀಜಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸ್ಥಳೀಯ ಶ್ರೀ ಜಗದ್ಗುರು ಜಾತ ನಾಗಲಿಂಗ ಮಹಾಸ್ವಾಮಿ ವಿದ್ಯಾಪೀಠದಲ್ಲಿ ನಡೆದಲ್ಲಿ ಜರುಗಿದ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು

ಉಪನ್ಯಾಸಕಿ ನಿರ್ಮಲ ಬಟ್ಟಲ್ ಮಾತನಾಡಿ ಇಂದು ಮೌಲ್ಯವರ್ದಿತ ಶಿಕ್ಷಣ ಅವಶ್ಯಕ ಎಂದರು. ಇದೆ ವೇಳೆ ಪಿಯುಸಿ ಮತ್ತು ಎಸ್ ಎಸ್ ಎಲ್ ಸಿ 75 ಹೆಚ್ಚು ಅಂಕ ಗಳಿಸಿದ ಪ್ರತಿಭಾನ್ವಿತ 12 ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆರ್ ಜಿ ಪಂಡಿತ, ಕಾಳಪ್ಪ ಬಡಿಗೇರ, ವಿ.ಕೆ.ಪೋತದಾರ, ಸುನಿಲ್ ಆರ್ಕಸಾಲಿ ಇದ್ದರು. ಸಂಸ್ಥೆ ಕಾರ್ಯಾಧ್ಯಕ್ಷ ಸಿದ್ದಯ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು, ಮುಖ್ಯೋಪಾಧ್ಯಾಯ ಎಲ್. ಎಚ್. ಕಮ್ಮಾರ ನಿರೂಪಣೆ, ಭೀಮರಾಶಿ ಹೂಗಾರ ವಂದಿಸಿದರು.




**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ನಗರದ ಶೆಟ್ಟರ್ ಲೇಔಟ್, ಲಿಂಗರಾಜ ನಗರ ಬ್ರಿಡ್ಜ್ ಹತ್ತಿರ ಇನ್ನರ್ ವೀಲ್ ಕ್ಲಬ್ ವತಿಯಿಂದ ನೂತನವಾಗಿ ನಿರ್ಮಿಸಲಾದ ಬಸ್ ನಿಲ್ದಾಣದ ಉದ್ಘಾಟನೆ ನೆರವೇರಿತು. ಶ್ರೀಮತಿ ಸಹನಾ ಪೈಕೋಟಿ, ಶ್ರೀಮತಿ ವೀಣಾ ಬರಾಡ್ವಾಡ್, ಲತಾ ಜಮಖಂಡಿ, ಕ್ಲಬ್ ಅಧ್ಯಕ್ಷರಾದ ಸುಷ್ಮಾ ಹಿರೇಮಠ, ರೇಖಾ ಪಾಟೀಲ, ವಿಜಯಲಕ್ಷ್ಮಿ ಕಟ್ಟಿಮಠ, ಎಲೀನಾ ಫ್ಲೋರೆನ್ಸ್, ರೇಖಾ ಓದುಗೌಡರ, ಜ್ಯೋತಿ ಬಜ್ಜಿ, ಜಯಶ್ರೀ ವಾಲಿ, ಕವಿತಾ ಸಾವಳಗಿ, ವಿಜಯ ಲಕ್ಷೀ ಹಸಬಿ, ಪಿಡಿಸಿ ರುಕ್ಸನಾ ಕಿತ್ತೂರ ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001